# ಧೈರ್ಯದ ದಾರಿ

ನಿಮ್ಮ ನಂಬಿಕೆಯ ಧ್ವನಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 87

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಬುಧವಾರ: 11-03-2026


**SEHRI & IFTARI TIME**

**DAY :WEDNESDAY**
**RAMZAN : 21**
**DATE: 11.03.2026**
**END TIME OF SEHRI :5:17 AM**
**FAJAR AZAAN : 5:22 AM**

**IFTAR TIME : 6:32 PM**



ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ ಕಾರ್ಯದರ್ಶಿಗಳು : ಮತ್ ವಾಲೆ ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ ಸಂಪಾದಕರು : ಧೈರ್ಯದ ದಾರಿ ಕನ್ನಡ ದಿನಪತ್ರಿಕೆ


ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


# ಅಧಿಕ ಉಷ್ಣಾಂಶ ದಾಖಲಾಗುವ ಸಾಧ್ಯತೆ: ಆರೋಗ್ಯ ಕಾಪಾಡಲು ಜಿಲ್ಲಾಧಿಕಾರಿ ಮನವಿ

ಧೈರ್ಯದ ದಾರಿ



**ರಾಯಚೂರು ಮಾ.10–** ಭಾರತೀಯ ಹವಾಮಾನ ಇಲಾಖೆಯ ವರದಿಯ ಪ್ರಕಾರ ಮುಂದಿನ ದಿನಗಳಲ್ಲಿ ರಾಯ ಚೂರು ಜಿಲ್ಲೆಯಲ್ಲಿ ಅಧಿಕ ಉಷ್ಣಾಂಶ ದಾಖಲಾಗುವ ಸಾಧ್ಯತೆಯಿದ್ದು, ಬಿಸಿ ಗಾಳಿ (ಹೀಟ್ ವೇವ್) ಎಚ್ಚರಿಕೆ ನೀಡಲಾಗಿದೆ. ಹೀಟ್ ವೇವ್ ಸ್ಟ್ರೋಕ್ ನಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿ ರುವುದರಿಂದ ಮುಂಜಾಗ್ರತಾ ಕ್ರಮವಾಗಿ ಎಲ್ಲಾ ಸಾರ್ವಜನಿಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮನವಿ ಮಾಡುತ್ತಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

**ಸಾರ್ವಜನಿಕರು ಏನು ಮಾಡಬೇಕು:** ಸಾರ್ವಜನಿಕರು ರೇಡಿಯೋ, ಟಿವಿ, ದಿನ ಪತ್ರಿಕೆಗಳಲ್ಲಿ ಬಿಸಿಲಿನ ತಾಪಮಾನದ ಕುರಿತು ಮುನ್ಸೂಚನೆಗಳನ್ನು ಪಡೆದುಕೊಳ್ಳಬೇಕು. ಬಾಯಾರಿ ಕೆಯಿಲ್ಲದಿದ್ದರೂ ಸಾಧ್ಯವಾದಷ್ಟು ಹೆಚ್ಚಾಗಿ ನೀರನ್ನು ಕುಡಿಯಬೇಕು. ತೆಳುವಾದ ಸಡಿಲವಾದ ಹತ್ತಿಯ ಉಡುಪುಗಳನ್ನು ಧರಿಸಬೇಕು. ಆದಷ್ಟು ಬಿಳಿ ಬಣ್ಣದ ಬಟ್ಟೆಗಳ ಬಳಕೆ ಒಳ್ಳೆಯದು. ಬಿಸಿಲಿನಲ್ಲಿ ಹೊರಗೆ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಟೋಪಿ, ಬೂಟುಗಳು ಅಥವಾ ಚಪ್ಪಲಗಳನ್ನು ಬಳಸಬೇಕು.

ದೂರದ ಪ್ರಯಾಣವನ್ನು ರಾತ್ರಿ ವೇಳೆ ಮಾಡುವುದು ಉತ್ತಮ, ಒಂದು ವೇಳೆ ಪ್ರಯಾಣ ಮಾಡುವ ಸಂದರ್ಭ ಬಂದರೆ ಪ್ರಯಾಣ ಮಾಡುವಾಗ ನಿಮ್ಮೊಂದಿಗೆ ನೀರನ್ನು ತೆಗೆದುಕೊಂಡು ಹೋಗುವುದು. ನೀವು ಹೊರಗೆ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿಯನ್ನು ಬಳಸಿ ಮತ್ತು ನಿಮ್ಮ

ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಸಹ ಬಳಸಬೇಕು.

ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ, ಶರಬತ್, ನಿಂಬೆ ನೀರು, ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ಅದು ದೇಹವನ್ನು ಪುನಃ ತಂಪಾಗಿಡಲು ಸಹಾಯ ಮಾಡುತ್ತದೆ. ಪ್ರಾಣಿ/ಪಕ್ಷಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ನೀಡಬೇಕು.

ಆದಷ್ಟು ಫ್ಯಾನಗಳನ್ನು ಬಳಸಿ, ಒದ್ದೆಯಾದ ಬಟ್ಟೆಗಳನ್ನು ಮತ್ತು ಆಗಾಗ್ಗೆ ತಣ್ಣೀರಿನಲ್ಲಿ ಸ್ನಾನ ಮಾಡಿ. ಕೆಲಸದ ಸಮಯವನ್ನು ಆದಷ್ಟು ತಂಪಾದ ಸಮಯದಲ್ಲಿ ಮಾಡುವುದು ಹಾಗೂ ಕೆಲಸದ ಸ್ಥಳದ ಬಳಿ ತಂಪಾದ ಕುಡಿಯುವ ನೀರನ್ನು ಒದಗಿಸಬೇಕು. ಕೆಲಸ ನಿರ್ವಹಿಸುವ ಗರ್ಭಿಣಿ ಮಹಿಳೆಯರು ಮತ್ತು ಅನಾರೋಗ್ಯದಲ್ಲಿರುವ ಕಾರ್ಮಿಕರಿಗೆ ಹೆಚ್ಚಿನ ಗಮನ ನೀಡಬೇಕು.

ಕಲ್ಲಂಗಡಿ, ಕರಬೂಜ, ಕಿತ್ತಳೆ ದ್ರಾಕ್ಷಿ, ಅನನಾಸ್, ಸೌತೆಕಾಯಿ, ಎಳನೀರನ್ನು ಹೆಚ್ಚಾಗಿ ಸೇವಿಸಬೇಕು. ನವಜಾತ ಶಿಶುಗಳು, ಹಿರಿಯ ನಾಗರಿಕರು ಹಾಗೂ ಚಿಕ್ಕ ಮಕ್ಕಳು, 2ನೇಪುಟಕ್ಕೆ

# ಸಿರವಾರ: ಸೊಳ್ಳೆಗಳ ಕಾಟಕ್ಕೆ ಬೆದರಿದ ಜನ

## ಫಾಗಿಂಗ್ ಮಾಡಿಸುವಂತೆ ಮಾನವ ಹಕ್ಕುಗಳ ಪರಿಷತ್‌ನಿಂದ ಮನವಿ



ಧೈರ್ಯದ ದಾರಿ

**ಸಿರವಾರ:** ಪಟ್ಟಣದ ಒಟ್ಟು 20 ವಾರ್ಡುಗಳಲ್ಲಿ ಸೊಳ್ಳೆಗಳ ಕಾಟ ವಿಪರೀತವಾಗಿದ್ದು, ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗಿದೆ. ಈ ಹಿನ್ನೆಲೆಯಲ್ಲಿ ತಕ್ಷಣವೇ ಪಟ್ಟಣದಾದ್ಯಂತ ಫಾಗಿಂಗ್ (Fogging) ಮಾಡಿಸುವಂತೆ ಒತ್ತಾಯಿಸಿ ಭಾರತೀಯ ಮಾನವ ಹಕ್ಕುಗಳ ಪರಿಷತ್ ವತಿಯಿಂದ ಪಟ್ಟಣ ಪಂಚಾಯಿತಿಗೆ ಮನವಿ ಪತ್ರ ಸಲ್ಲಿಸಲಾಯಿತು.

**ಪರಿಷತ್ ಆಗ್ರಹ:** ಪಟ್ಟಣದ ಚರಂಡಿಗಳಲ್ಲಿ ಹೂಳು ತುಂಬಿಕೊಂಡಿರುವುದು ಹಾಗೂ ಅಶುಚಿಯೇ ಸೊಳ್ಳೆಗಳ ಉತ್ಪತ್ತಿಗೆ ಮುಖ್ಯ ಕಾರಣವಾಗಿದೆ. ಪಟ್ಟಣ ಪಂಚಾಯಿತಿ ಅಧಿಕಾರಿಗಳು ತಕ್ಷಣವೇ ಎಚ್ಚೆತ್ತುಕೊಂಡು ಎಲ್ಲಾ ವಾರ್ಡುಗಳಲ್ಲಿ ಔಷಧಿ ಸಿಂಪಡಣೆ (ಫಾಗಿಂಗ್) ಮಾಡಬೇಕು ಎಂದು ಪರಿಷತ್ ಮುಖಂಡರು ಒತ್ತಾಯಿಸಿದ್ದಾರೆ.

"ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಪಟ್ಟಣ ಪಂಚಾಯಿತಿ ತಕ್ಷಣವೇ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಪ್ರತಿಭಟನೆ ನಡೆಸಲಾಗುವುದು."ಭಾರತೀಯ ಮಾನವ ಹಕ್ಕುಗಳ ಪರಿಷತ್ ಪದಾಧಿಕಾರಿಗಳು.

ಈ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕರಾದ ಶ್ರೀನಿವಾಸ್ ರೆಡ್ಡಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾದ ಖಾಜಾ, ತಾಲೂಕು ಸಂಚಾಲಕರಾದ ಇಸ್ಮಾಯಿಲ್, ತಾಲೂಕ ಅಧ್ಯಕ್ಷರಾದ ನಬೀರಸೂಲ್ ಕ್ಯಾದಿಗೆರಾ, ಇತರರಿದ್ದರು.

**-:ಪ್ರಮುಖಾಂಶಗಳು:-**

- **ಹೆಚ್ಚಿದ ಸೊಳ್ಳೆಗಳ ಕಾಟ:** ಕಳೆದ ಕೆಲವು ದಿನಗಳಿಂದ ಪಟ್ಟಣದ 20 ವಾರ್ಡುಗಳಲ್ಲಿ ಸೊಳ್ಳೆಗಳ ಹಾವಳಿ ಮಿತಿ ಮೀರಿದ್ದು, ಸಾರ್ವಜನಿಕರು ರಾತ್ರಿ ವೇಳೆ ನೆಮ್ಮದಿಯಿಂದ ನಿದ್ರೆ ಮಾಡಲು ಸಾಧ್ಯವಾಗುತ್ತಿಲ್ಲ.
- **ರೋಗಗಳ ಭೀತಿ:** ಡೆಂಗ್ಯೂ, ಮಲೇರಿಯಾದಂತಹ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇರುವುದರಿಂದ ಪಟ್ಟಣದ ನಿವಾಸಿಗಳು ಆತಂಕಕ್ಕೊಳಗಾಗಿದ್ದಾರೆ.

# ಮಾನಸಿಕ ಆರೋಗ್ಯವನ್ನು ನಿರ್ಲಕ್ಷಿಸಬೇಡಿ :ಡಾ. ಅಂಬಿಕಾ ಮಧುಸೂಧನ




ಯುವಮಾರ್ಗ ಸುದ್ದಿ

**ಮಾನ್ವಿ:** ತಾಲೂಕಿನ ಕರಡಿಗುಡ್ಡ ಗ್ರಾಮದಲ್ಲಿ ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯದ ವತಿಯಿಂದ ನಡೆದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ಶಿಬಿರದ 6 ನೇ ದಿನದ ಕಾರ್ಯಕ್ರಮದಲ್ಲಿ ಡಾ.ಅಂಬಿಕಾ ಮಧುಸೂಧನರವರು ವಿಶೇಷ ಉಪನ್ಯಾಸ ನೀಡಿ ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ಭಾಗವಹಿಸುವುದರಿಂದ ನಾಯಕತ್ವ ಗುಣಗಳನ್ನು ಬೆಳಿಸಿಕೊಳ್ಳಲು ಸಾಧ್ಯವಾಗುತ್ತದೆ. ಮನುಷ್ಯನಿಗೆ ದೈಹಿಕ ಸಮಸ್ಸೆ ಎಷ್ಟು ಮುಖ್ಯನೋ ಅಷ್ಟೇ ಮಾನಸಿಕ ಸಮಸ್ಸೆ ಪ್ರತಿಯೊಬ್ಬ ವ್ಯಕ್ತಿಗೆ ಮುಖ್ಯವಾಗಿರುತ್ತದೆ . ಮಾನಸಿಕ ಸಮಸ್ಸೆಯಿಂದ ಖಿನ್ನತೆ ಒಳಗಾಗುವುದು, ಉದ್ವೇಗಕ್ಕೆ ಒಳಗಾಗುವುದು, ಇಂದಿನ ಯುವಕರು ದುಃಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ, ಅಪೌಷ್ಟಿಕತೆಯಿಂದ ಮಾನಸಿಕ ಸಮಸ್ಸೆಗೆ ಒಳಗಾಗುತ್ತಿದ್ದಾರೆ. ಇಂದಿನ ಯುವಕ- ಯುವತಿಯರು ಮೊಬೈಲ್ ಹಾವಳಿಯಿಂದ ಮಾನಸಿಕ ಸಮಸ್ಸೆಗೆ ಒಳಗಾಗುತ್ತಿದ್ದಾರೆ. ಇಂದಿನ ವಿದ್ಯಾರ್ಥಿಗಳು ಮಾನಸಿಕವಾಗಿ ಸದೃಡರಾಗಬೇಕೆಂದರೆ ಉತ್ತಮವಾದ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದರೆ ಯೋಗ ಮಾಡಬೇಕು ಎಂದುಹೇಳಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ರವಿ ಸುಂಕನೂರು ಉದ್ಘಾಟಿಸಿ ಮಾತನಾಡಿ ಯೋಜನೆ ಮತ್ತು ಪ್ರಯೋಜನೆ ಪ್ರತಿಯೊಬ್ಬ ವಿದ್ಯಾರ್ಥಿಗಳು ಪಡೆದು ಕೊಳ್ಳಬೇಕು ಎಂದು ಹೇಳಿದರು.ಇನ್ನೊರ್ವ ಮುಖ್ಯ ಅತಿಥಿಯಾಗಿ ದೇವೇಂದ್ರಪ್ಪ ಕರಡಿಗುಡ್ಡ ಮಾತನಾಡಿ ಪ್ರತಿಯೊಬ್ಬ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಇರಬೇಕು ನಾವು ಒಂದು ಕಾರ್ಯಕ್ರಮವನ್ನು ಆಯೋಜನೆ ಮಾಡಿ ಕೊಳ್ಳಬೇಕೆಂದರೆ ಆಯ್ಕೆ, ಅವಕಾಶ, 2ನೇಪುಟಕ್ಕೆ

### ನೇತಾಜಿ 10 ನೇ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ

# ಸತತ ಪ್ರಯತ್ನ ಮಾಡಿ ಉಜ್ವಲ ಭವಿಷ್ಯ ನಿಮ್ಮದಾಗುತ್ತದೆ: ಕೆ.ವಿಜಯಲಕ್ಷ್ಮಿ



ಧೈರ್ಯದ ದಾರಿ

**ಮಾನ್ವಿ:-** ಪರೀಕ್ಷೆ, ಬದುಕು ಎರಡೂ ಬಲಿದಾನ ಬೇಡುತ್ತವೆ, ಆ ಬಲಿದಾನವೇ ಸತತ ಪ್ರಯತ್ನ, ನಿರಂತರ ಪ್ರಯತ್ನ ಮಾಡಿ ಯಶಸ್ಸು ನಿಮ್ಮದಾಗುತ್ತದೆ ಎಂದು ನೇತಾಜಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೆ.ವಿಜಯ ಲಕ್ಷ್ಮಿ ಹೇಳಿದರು. ಅವರು ಇಂದು ನೇತಾಜಿ ಶಿಕ್ಷಣ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ಹತ್ತನೇ ತರಗತಿಯ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ದಲ್ಲಿ ಕಾರ್ಯಕ್ರಮ ಉಧ್ಘಾಟಿಸಿ ಮಾತನಾಡಿದರು.

ತಂದೆ ತಾಯಿ ಗುರು ಹಿರಿಯರನ್ನು ಪ್ರೀತಿಸಿ,ಗೌರವದಿಂದ ಕಾಣಿ. ತಂದೆ ತಾಯಿಯ ಆಶೀರ್ವಾದ ಇದ್ದರೆ ಏನಾದರೂ ಸಾಧಿಸಲು ಸಾಧ್ಯ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕೆ.ರವಿವರ್ಮಾ, ಕೆ.ವಿನಯಾ, ಅನೀಸ್ ಫಾತಿಮಾ ಮೇಡಂ, ಬಸವರಾಜ, ರಹಿಮಂಪಾಷಾ, ಆರೀಫ್,ಅರುಣ,ಹನುಮಂತ, ರಿಹಾನಾ,ಆಫಿಯಾ ಶಿಕ್ಷಕರು ಮಾತನಾಡಿದರು. ವಿದ್ಯಾರ್ಥಿ ಗಳು ಅನಿಸಿಕೆ ವ್ಯಕ್ತಪಡಿಸಿದರು. ಇದೆ ಸಮಯದಲ್ಲಿ ಹತ್ತನೇ ತರಗತಿಯ ವಿದ್ಯಾರ್ಥಿ ಗಳು ಸಂಸ್ಥೆ ಗೆ ಖಿ.ಗಿ.ಕಾಣಿಕೆಯಾಗಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕೆ.ಈ.ನರಸಿಂಹ ನಮ್ಮ ಶಿಕ್ಷಣ ಸಂಸ್ಥೆಯಲ್ಲಿ ಕಲಿಕೆಯ ಜೊತೆಗೆ ಸಂಸ್ಕಾರ ಕಲಿಸಲಾಗುತ್ತದೆ. ವಿದ್ಯಾರ್ಥಿಗಳು ಜೀವನದ ಸವಾಲು ಹೇಗೆ ಮೆಟ್ಟಿನಿಲ್ಲಬೇಕು ಎನ್ನುವ ಮನೋಭಾವ ನಮ್ಮಲ್ಲಿ ಕಲಿಯುತ್ತಾರೆ ಎಂದು ಹೇಳಿದರು. ಕೊನೆಯಲ್ಲಿ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

# ರಾಷ್ಟ್ರೀಯ ಸೇವಾ ಯೋಜನೆ(NSS)ವತಿಯಿಂದ ಯುವಕರಲ್ಲಿ ನಾಯಕತ್ವ ಗುಣಗಳು ಬೇಳೆಯುತ್ತವೆ

### ಶ್ರೀ ಮಹಾದೇವಪ್ಪ ಸಹಾಯಕ ಪ್ರಾಧ್ಯಾಪಕರು ಸರಕಾರಿ ಪ್ರಥಮ ದರ್ಜೆ ಕಾಲೇಜು ಸಿರವಾರ

ಧೈರ್ಯದ ದಾರಿ




**ಸಿರವಾರ:**ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಿರವಾರದ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವಾರ್ಷಿಕ ವಿಶೇಷ ಶಿಬಿರದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡುತ್ತಾ ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ವಿದ್ಯಾರ್ಥಿಗಳು ಪಾಲ್ಗೊಳ್ಳುವುದರಿಂದ ಅವರಿಗೆ ನಾಯಕತ್ವ ಗುಣಗಳು ಬೆಳೆಯುತ್ತವೆ ಎಂದರು ಎನ್‌ಎಸ್‌ಎಸ್ ವಿವಿಧ ರೀತಿಯ ಸಾಮಾಜಿಕ ಜಾಗೃತ ಕಾರ್ಯಕ್ರಮಗಳನ್ನು ಪರಿಸರ ಸಂರಕ್ಷಣಾ ಕಾರ್ಯಕ್ರಮಗಳನ್ನು ಮತ್ತು ಗ್ರಾಮಗಳಲ್ಲಿನ ವಿಶೇಷ ಸಮಸ್ಯೆಗಳ ಪರಿಹಾರಕ್ಕಾಗಿ ವಿದ್ಯಾರ್ಥಿಗಳು ಪ್ರಯತ್ನಿಸುವ ಕಾರ್ಯಕ್ರಮಗಳನ್ನು ಮಾಡುತ್ತದೆ ಆದುದರಿಂದ ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣಗಳು ಬೆಳೆಯುತ್ತವೆ ಎಂದರು.

ಮತ್ತೊಬ್ಬ ಮುಖ್ಯ ಅತಿಥಿಗಳು ಶ್ರೀ ಚುಕ್ಕಿ ಸೂಗಪ್ಪ ಸಾಹುಕಾರ ರವರು ಮಾತನಾಡುತ್ತಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಿರವಾರದ ಏನ್ ಎಸ್ ಎಸ್ ಘಟಕವು ಗ್ರಾಮಗಳಲ್ಲಿ ಬಾಲ್ಯ ವಿವಾಹದಂತಹ ಹಾಗೂ ಸ್ವಚ್ಛತಾ ಕಾರ್ಯಕ್ರಮಗಳನ್ನು ಮಾಡುತ್ತಿದ್ದು ಶ್ಲಾಘನೀಯ ವಾದದ್ದು ಎಂದರು ವಿದ್ಯಾರ್ಥಿಗಳು ಇಂತಹ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಅನುಭವ ಪಡೆಯಬೇಕು ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶ್ರೀ ಹನುಮಂತ ಚೆನ್ನುರ್ ಪ್ರಾಚಾರ್ಯರು ಸರಕಾರಿ ಪದವಿ ಪೂರ್ವ ಕಾಲೇಜು ಸಿರವಾರ ರವರು ಮಾತನಾಡುತ್ತಾ ಯುವಕರು ಸಮಾಜಮುಖಿ ಕಾರ್ಯಕ್ರಮಗಳನ್ನು ಎನ್‌ಎಸ್‌ಎಸ್ ಘಟಕದ ಮುಖಾಂತರ ಮಾಡಬೇಕು ಸ್ವಚ್ಛತಾ ಕಾರ್ಯಗಳು ಜಾಗೃತ ಕಾರ್ಯಗಳು ಮತ್ತು ಸಮಾಜಮುಖಿ ಕಾರ್ಯಕ್ರಮಗಳನ್ನು ನಿರಂತರ ಮಾಡಿ ಸಾಮಾಜಿಕ ಸೇವೆಗಳನ್ನು ಮಾಡಬೇಕೆಂದರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಎನ್‌ಎಸ್‌ಎಸ್ ಘಟಕ ಹಲವಾರು ವರ್ಷಗಳಿಂದ ಗ್ರಾಮಗಳಲ್ಲಿ ಉತ್ತಮವಾದ ಜಾಗೃತಿ ಕಾರ್ಯಕ್ರಮಗಳನ್ನು ಮಾಡುತ್ತಿದ್ದು ಶ್ಲಾಘನೀಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ. ಹನುಮಂತ ಕೋರಪುರ್ ರವರು ಅಧ್ಯಕ್ಷೀಯ ನುಡಿಗಳನ್ನು ಮಾತನಾಡುತ್ತಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನಿರಂತರವಾಗಿ ಶೈಕ್ಷಣಿಕ ಹಾಗೂ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿದೆ ಇದಕ್ಕೆ ಸಿರವಾರ ಪಟ್ಟಣದ ಎಲ್ಲಾ ಪ್ರಮುಖರ ಸಹಕಾರ ಅವಶ್ಯಕವಾಗಿದೆ ಎಂದರು.

ಇಂದಿನ ಉದ್ಘಾಟನಾ ಕಾರ್ಯಕ್ರಮವು ಮೊದಲಿಗೆ ಎನ್ ಎಸ್ ಎಸ್ ಧ್ವಜಾರೋಹಣ ದೊಂದಿಗೆ ಪ್ರಾರಂಭವಾಯಿತು ಧ್ವಜಾರೋಹಣವನ್ನು ಸಿರವಾರ ಪಟ್ಟಣದ ವಾಣಿಜ್ಯೋದ್ಯಮಗಳಾದ ಶ್ರೀ ಚುಕ್ಕಿ ಸೂಗಪ್ಪ ಸಾಹುಕಾರ್ ರವರು ನೆರವೇರಿಸಿದರು. ಎನ್‌ಎಸ್‌ಎಸ್ ವಿದ್ಯಾರ್ಥಿಯಾದ ಕುಮಾರಿ ಬಬನ್ ಬೀ ಪ್ರಾರ್ಥಿಸಿದರು ಶ್ರೀ ಸುಭಾನ್ ಸಾಬ್ ಸಹಾಯಕ ಪ್ರಾಧ್ಯಾಪಕರು ವಾಣಿಜ್ಯ ಶಾಸ್ತ್ರ ವಿಭಾಗ ರವರು ಸ್ವಾಗತಿಸಿದರು ಡಾ. ಮೂಗವ್ವ ಹಂದೆರ್ ವರು ಹೊಂದಿಸಿದರು ಶ್ರೀ ಮುತ್ತಪ್ಪ ಸಹಾಯಕ ಪ್ರಾಧ್ಯಾಪಕರು ಇತಿಹಾಸ ವಿಭಾಗ ರವರು ಕಾರ್ಯಕ್ರಮವನ್ನು ನಿರೂಪಿಸಿದರು.

ಮೊದಲನೇ ಪುಟದಿಂದ

# ಮಾನಸಿಕ ಆರೋಗ್ಯವನ್ನು ನಿರ್ಲಕ್ಷಿಸಬೇಡಿ :ಡಾ. ಅಂಬಿಕಾ ಮಧುಸೂಧನ

ಬದಲಾವಣೆ ಮಾಡಿಕೊಂಡಾಗ ನಾವು ಮಾಡಿದ ಕಾರ್ಯ ಇನ್ನೊಬ್ಬರಿಗೆ ಪ್ರೇರಣೆಯಾಗುತ್ತದೆ ಎಂದು ಹೇಳಿದರು. ವಿದ್ಯಾರ್ಥಿಗಳು ನಕಾರಾತ್ಮಕವಾಗಿ ಆಲೋಚನೆ ಮಾಡಬೇಡಿ ಸಾಕಾರಾತ್ಮಕವಾಗಿ ಆಲೋಚನೆ ಮಾಡಿ ಒಳ್ಳೆಯದಾಗುತ್ತದೆ ಎಂದು ಹೇಳಿದರು. ನಾರಾಯಣ ಮುಖ್ಯಗುರುಗಳು ಮಾತನಾಡಿ ವಿದ್ಯಾರ್ಥಿಗಳು ನಮ್ಮ ಊರಿನ ಜನಗಳಿಗೆ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸಿದರು ಮತ್ತು ನಮ್ಮ ಶಾಲೆಯ ಮೈದಾನವನ್ನು ಸೇವಾ ಮನೋಭಾವ ನೆಯಿಂದ ಉತ್ತಮವಾದ ಶ್ರಮದಾನ ಮಾಡಿದ್ದೀರಿ ಎಂದು ಹೇಳಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಂಬಣ್ಣ ನಾಯಕ ವಹಿಸಿ ಮಾತನಾಡಿ ರಾಷ್ಟ್ರೀಯ ಸೇವಾ ಯೋಜನೆಯ ಮೂಲ ಉದ್ದೇಶವೇನೆಂದರೆ ಪ್ರತಿಯೊಂದು ದಿನ ಕಾರ್ಯಕ್ರಮ ಆಯೋ ಜನೆ ಮಾಡಿ ವಿಶೇಷ ಉಪನ್ಯಾಸ ನೀಡಿದ ವಿಷಯದ ಮೌಲ್ಯಗ 'ಳನ್ನು ಜೀವನದಲ್ಲಿ ಪ್ರತಿಯೊಬ್ಬ ಶಿಬಿರಾರ್ಥಿಗಳು ಸದುಪಯೋಗ ಪಡಿಸಿಕೊಳ್ಳಬೇಕೆಂದು ಎಂದು ಹೇಳಿದರು .ಈ ಕಾರ್ಯಕ್ರಮದಲ್ಲಿ

ಕಾಲೇಜಿನ ಪ್ರಾಚಾರ್ಯರಾದ ಶಂಕರಪ್ಪ ಅಂಗಡಿ,ಊರಿನ ಮುಖಂಡರಾದ ಬಾಲಯ್ಯ ನಾಯಕ ಸಹಾಯಕ ಪ್ರಾಧ್ಯಾಪಕರು, ಡಾ.ದೇವೇಂದ್ರಪ್ಪ ಕರಡಿಗುಡ್ಡ ಸಹಾಯಕ ಪ್ರಾಧ್ಯಾಪಕರು, ಭಾಗಯ್ಯ ನಾಯಕ ಉಪನ್ಯಾಸಕರು,ರಾಷ್ಟ್ರೀಯ ಸೇವಾ ಯೋಜನೆಯ ಅಧಿಕಾರಿಗಳಾದ ಆಂಜನೇಯ ನಸಲಾಪುರ.ಚಂದ್ರಶೇಖರ ಎಚ್ ಸಹಾಯಕ ಪ್ರಾಧ್ಯಾಪಕರು. ಉಪನ್ಯಾಸಕರಾದ ಶರಣಬಸವ ಕರಡಿಗುಡ್ಡ, ಶೈಲಜಾ, ಸಂತೋಷ ಸೇರಿದಂತೆ ಕಾಲೇಜಿನ ಉಪನ್ಯಾಸಕರು ಮತ್ತು ಶಿಬಿರಾರ್ಥಿಗಳು ಗ್ರಾಮಸ್ಥರು ಭಾಗವಹಿಸಿದ್ದರು. ಎನ್.ಎಸ್.ಎಸ್ ಗೀತೆಯನ್ನು ರಾಜೇಶ್ವರಿ ಸಂಗಡಿಗರು ಹಾಡಿದರು. ರೇಣುಕಾ ನಿರೂಪಿಸಿದರು, ಐಶ್ವರ್ಯ ಸ್ವಾಗತಿಸಿದರು, ಶಾವಂತ್ರಿ ವಂದಿಸಿದರು.

# ಅಧಿಕ ಉಷ್ಣಾಂಶ ದಾಖಲಾಗುವ ಸಾಧ್ಯತೆ: ಆರೋಗ್ಯ ಕಾಪಾಡಲು ಜಿಲ್ಲಾಧಿಕಾರಿ ಮನವಿ

ಗರ್ಭಿಣಿಯರು, ಹೊರಾಂಗಣದಲ್ಲಿ ಕೆಲಸ ನಿರ್ವಹಿಸುವವರು, ಮಾನಸಿಕ ಸಮಸ್ಯೆಗಳಿಂದ ಬಳಲುತ್ತಿರುವವರು ಹಾಗೂ ಇತರ ಆರೋಗ್ಯ ಸಮಸ್ಯೆಗಳಿರುವವರು, ಅದರಲ್ಲೂ ವಿಶೇಷವಾಗಿ ಹೃದ್ರೋಗ ಹಾಗೂ ರಕ್ತದ ಒತ್ತಡದಿಂದ ಬಳಲುತ್ತಿರುವವರು ಹೆಚ್ಚು ಜಾಗರೂಕತೆ ವಹಿಸಬೇಕು.

**ಸಾರ್ವಜನಿಕರು ಏನು ಮಾಡಬಾರದು:** ಮಕ್ಕಳು ಅಥವಾ ಸಾಕುಪ್ರಾಣಿಗಳನ್ನು ಬಿಸಿಲಿನಲ್ಲಿ ನಿಲ್ಲಿಸಿದ ವಾಹನಗಳ ಹತ್ತಿರ ಬಿಡಬೇಡಿ. ವಾಹನಗಳ ಒಳಾಂಗಣದಲ್ಲಿನ ಹೆಚ್ಚಿನ ತಾಪಮಾನವು ಅವರಿಗೆ/ಅವುಗಳಿಗೆ ಅಪಾಯಕಾರಿಯಾಗಬಹುದು. ಕಪ್ಪು ಬಟ್ಟೆ ಅಥವಾ ಬಿಗಿಯಾದ ಬಟ್ಟೆಗಳನ್ನು ಧರಿಸುವುದನ್ನು ತಪ್ಪಿಸಿ. ಹೊರಗಿನ ತಾಪಮಾನ ಹೆಚ್ಚಾದಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಿ. ಅಲ್ಲದೆ ಮಧ್ಯಾಹ್ನ 12 ರಿಂದ 3 ರವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಿ. ಬಿಸಿಲಿನ ಸಮಯದಲ್ಲಿ ಅಡುಗೆ ಮಾಡುವುದನ್ನು ತಪ್ಪಿಸಬೇಕು. ಅಡುಗೆ ಪ್ರದೇಶವನ್ನು ಸಮರ್ಪಕವಾಗಿ ಗಾಳಿಯಾಡಲು ಬಾಗಿಲು ಮತ್ತು ಕಿಟಕಿಗಳನ್ನು ತೆರೆಯಿರಿ. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಹಾನಿಕಾರಕ ಪಾನೀಯಗಳನ್ನು ಸೇವಿಸಬೇಡಿ. ಇವು ಹೊಟ್ಟೆ ನೋವನ್ನು ಉಂಟು ಮಾಡುತ್ತದೆ. ಹಾನಿಕಾರಕವಾದ ಆಹಾರ ಮತ್ತು ಹಳಸಿದ ಆಹಾರವನ್ನು ಸೇವಿಸಬಾರದು ಅಲ್ಲದೆ ಚಪ್ಪಲಿ ಧರಿಸದೆ ಹೊರಹೋಗುವ ಅಭ್ಯಾಸವನ್ನು ತಪ್ಪಿಸಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆಯರು ಸ್ವಾಭಿಮಾನಿಗಳಾಗುತ್ತಿರುವುದು ವಿಶೇಷ: ಡಾ.ನಂದಿತಾ ಎಮ್.ಎನ್.



ಧೈರ್ಯದ ದಾರಿ

**ರಾಯಚೂರು ಮಾ,10–** ಈ ಹಿಂದೆ ಕೇವಲ ಮನೆಗಷ್ಟೇ ಸೀಮಿತವಾಗಿದ್ದ ಮಹಿಳೆಯು ಇದೀಗ ಎಲ್ಲಾ ಕ್ಷೇತ್ರಗಳಲ್ಲಿ ಮುಂಚೂಣಿಗೆ ಬಂದು ತನ್ನ ಸಾಮರ್ಥ್ಯ ಪ್ರದರ್ಶಿಸುತ್ತಿದ್ದಾಳೆ. ಇದು ಮಹಿಳಾ ಸ್ವಾಭಿಮಾನ ಮತ್ತು ಸಬಲೀಕರಣಕ್ಕೆ ಸಾಕ್ಷಿಯಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ.ನಂದಿತಾ ಎಮ್.ಎನ್. ಅವರು ಹೇಳಿದರು.

ಮಾರ್ಚ್ 09ರ ಸೋಮವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ರಂಗೋಲಿ ಸ್ಪರ್ಧೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಶಿಕ್ಷಣ, ರಾಜಕೀಯ, ಶೈಕ್ಷಣಿಕ, ವಿಜ್ಞಾನ, ಸಾಂಸ್ಕೃತಿಕ, ಕ್ರೀಡೆ ಸೇರಿದಂತೆ ಪ್ರತಿಯೊಂದು ಕ್ಷೇತ್ರಗಳಲ್ಲೂ ಮಹಿಳೆ ತನ್ನದೇ ಆದ ಛಾಪು ಮೂಡಿಸಿದ್ದಾಳೆ. ಅಂತಾರಾಷ್ಟ್ರೀಯ ಮಹಿಳಾ ದಿನದ ನಿಮಿತ್ತ ಹಮ್ಮಿಕೊಂಡ ರಂಗೋಲಿ ಸ್ಪರ್ಧೆಯು ಹೆಣ್ಣಿನ ಸಾಮರ್ಥ್ಯಕ್ಕೆ ಕನ್ನಡಿ ಹಿಡಿದಿದೆ ಎಂದರು.

ಮಹಿಳಾ ದಿನಾಚರಣೆಯು ಹೆಣ್ಣು ಮಕ್ಕಳ ಅಸ್ತಿತ್ವ, ಗುರಿ ಸಾಧನೆಯನ್ನು ಜಗದೆಲ್ಲಡೆ ಪಸರಿಸುವ ಮಹತ್ವದ ದಿನವಾಗಿದ್ದು, ಇಡೀ ಮಾರ್ಚ್ ತಿಂಗಳು ಮಹಿಳೆಯರ ಕಾರ್ಯ ಚಟುವಟಿಕೆಗಳನ್ನು ಗುರುತಿಸುವ ಕಾರ್ಯ ನಿರಂತರವಾಗಿ ನಡೆಯುವುದು. ಹೆಣ್ಣು ತಾಯಿಯಾಗಿ, ಸಹೋದರಿಯಾಗಿ, ಸ್ನೇಹಿತೆಯಾಗಿ, ಪತ್ನಿಯಾಗಿ, ಮಗಳಾಗಿ ತನ್ನದೇ ಆದ ಪಾತ್ರಗಳನ್ನು ನಿಭಾಯಿಸುತ್ತಾಳೆ ಎಂದರು.

ಬಹುಬಣ್ಣದ ರಂಗೋಲಿ ಚಿತ್ತಾರ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೃಷ್ಣ ಸಭಾಂಗಣದಲ್ಲಿ ಇಲಾಖೆಯ ಮಹಿಳಾ ಸಿಬ್ಬಂದಿಯಿಂದ ನಡೆದ ರಂಗೋಲಿ ಸ್ಪರ್ಧೆಯು ಸ್ತ್ರೀ ಶಕ್ತಿಯನ್ನು ಪ್ರತಿಬಿಂಬಿಸುವಂತಿತ್ತು.

ಭ್ರೂಣದ ಹಂತದಿಂದಲೇ ಹೆಣ್ಣಿನ ಕಾಳಜಿ ಮಾಡಿದಲ್ಲಿ ಮಹಿಳೆಯು ಕೇವಲ ತನಗಾಗಿಯಲ್ಲ, ಸಮಾಜಕ್ಕೆ, ದೇಶಕ್ಕೆ ಕೊಡುಗೆಗಳನ್ನು ನೀಡುವ ಅದ್ಭುತ ಸಾಧಕಿಯಾಗುತ್ತಾಳೆ ಎಂಬುದನ್ನು ನಾಗರತ್ನ ಅವರ ರಂಗೋಲಿ ಸಂದೇಶ ನೀಡಿತು.

ಯಾವುದೇ ವೃತ್ತಿಪರ ಕಲಾವಿದರಿಗೆ ಕಡಿಮೆ ಇಲ್ಲದಂತೆ ಧೈರ್ಯದಿಂದ ಮುಖ ಭಾವನೆಯೊಂದಿಗೆ ಹೆಣ್ಣಿನ ಜೀವನದ ಕನಸುಗಳಿಗೆ ಬಣ್ಣ ತುಂಬಿ ಎಂಬ ಕನಸಿನ ಸಂದೇಶವನ್ನು ಸುವರ್ಣ ಅವರ ರಂಗೋಲಿ ತಿಳಿಸಿತು.

ಮಹಿಳೆಯು ತನ್ನ ಆಲೋಚನೆಗಳನ್ನು ಕೃತಿರೂಪಕ್ಕೆ ಇಳಿಸಿ, ದೃಢ ವಿಶ್ವಾಸ, ಸಹನೆ, ಪ್ರಾಮಾಣಿಕತೆ, ಧೈರ್ಯ, ಮಮತೆ, ತಾಯ್ತನವನ್ನು ಪ್ರಕೃತಿಯ ರೂಪದಲ್ಲಿ ಕೊಂಡೊಯ್ಯುವ ಪ್ರಯತ್ನ ಮಾಡುವ ಅರ್ಥವನ್ನು ಶಾಲಿನಿ ಅವರ ರಂಗೋಲಿ ಹೊರಹೊಮ್ಮಿಸಿತು.

ನಾರಿಶಕ್ತಿ ಸಮಾಜದ ಪ್ರಗತಿ ಎಂಬುದನ್ನು ಗ್ರಾಮೀಣ ಸೊಗಡಿನಲ್ಲಿ ತನ್ನ ಮಗುವನ್ನು ಮಮತೆಯ ಸಮುದ್ರದಲ್ಲಿ ತೇಲಿಸುವ ಪರಿಯುಳ್ಳ ಅದ್ಭುತ ಕಲೆಯೊಂದಿಗೆ ಯಾವುದೇ ಜವಾಬ್ದಾರಿ ಪರಿಪೂರ್ಣವಾಗಿಸುವ ಗಟ್ಟಿತನವನ್ನು ತೋರಿಸುವ ಪ್ರಯತ್ನದ ಅರ್ಥವನ್ನು ಗೀತಾ ಅವರು ತಮ್ಮ ರಂಗೋಲಿ ಮೂಲಕ ನೀಡಿದರು.

ಮೇಘನಾ ಅವರು ಬಿಡಿಸಿದ ರಂಗೋಲಿಯು, ಆರೋಗ್ಯಕರ ತಾಯಿಗೆ ಆರೋಗ್ಯವಂತ ಮಗು, ಅದರಲ್ಲೂ ಹೆಣ್ಣು ಮಗು ಪ್ರಕೃತಿಯ ವರದಾನ, ಭ್ರೂಣ ಹತ್ಯೆ ಶಿಕ್ಷಾರ್ಹ ಅಪರಾಧ, ಹೆಣ್ಣುಮಗು ಉಳಿಸಿ, ಬೆಳಿಸಿ ಎಂಬ ಸಂದೇಶವನ್ನು ನೀಡಿತು.

ಲಕ್ಷ್ಮೀ ಅವರ ರಂಗೋಲಿಯು ಆರೋಗ್ಯ ಸುರಕ್ಷತೆಯಿಂದ ಸುಂದರ ಬದುಕು ಸಾಧ್ಯ ಎಂದು ಕೈಯಲ್ಲಿ ಹಣತೆಯೊಂದಿಗೆ ಹೆಜ್ಜೆ ಹಾಕುವ ದೃಶ್ಯ ಹಾಗೂ ಸ್ಪರ್ಧೆಯಲ್ಲಿ ಭಾಗವಹಿಸಬೇಕು ಎಂಬ ಸಂದೇಶವನ್ನು ನೀಡಿತು.

ಈ ವೇಳೆ ತೀರ್ಪುಗಾರರಾದ ಡಾ.ಶೀಲಶ್ರೀ ಅವರು ಮತನಾಡಿ, ಅತ್ಯುತ್ತಮ ರಚನೆ ಎನ್ನುವುದಕ್ಕಿಂತ ಯಾವುದೇ ರೇಖಾಚಿತ್ರ ಬಳಸದೆ ಬಿಡಿಸಿದ ರಂಗೋಲಿಗಳನ್ನು ಅಂತಿಮಗೊಳಿಸಿದ್ದು, ಬಹುಮಾನವನ್ನು ಮುಂದಿನ ದಿನಗಳಲ್ಲಿ ವೇದಿಕೆಯಲ್ಲಿ ಗಣ್ಯರ ಸಮ್ಮುಖದಲ್ಲಿ ನೀಡಲಾಗುವುದೆಂದು ತಿಳಿಸಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ
6360866626

# ಕೆಸಿ ವ್ಯಾಲಿ ನೀರು 3ನೇ ಹಂತದ ಸಂಸ್ಕರಣೆ ಆಗ್ರಹ



**ಬೆಂಗಳೂರು, ಮಾ. 10–** ಬೆಂಗಳೂರಿನ ನಗರದ ತ್ಯಾಜ್ಯ ನೀರನ್ನು ಎರಡು ಹಂತಗಳಲ್ಲಿ ಸಂಸ್ಕರಿಸಿ ಕೆ.ಸಿ. ವ್ಯಾಲಿ ಯೋಜನೆ ಮೂಲಕ ಪಂಪ್ ಮಾಡಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಕೆರೆಗಳನ್ನು ತುಂಬಿಸುತ್ತಿರುವ ನೀರು ಮಲಿನವಾಗಿದೆ. ಈ ನೀರನ್ನು 3ನೇ ಹಂತದಲ್ಲಿ ಸಂಸ್ಕರಿಸಿ ಎಂದು ಜೆಡಿಎಸ್‌ನ ಸಮೃದ್ಧಿ ಮಂಜುನಾಥ್ ಸರ್ಕಾರವನ್ನು ಆಗ್ರಹಿಸಿ, ಬಾಟಲಿಯಲ್ಲಿ ನೀರನ್ನು ಸದನದಲ್ಲಿ ಪ್ರದರ್ಶಿಸಿದರು.

ಪ್ರಶ್ನೋತ್ತರ ಸಂದರ್ಭದಲ್ಲಿ ಕೆ.ಸಿ. ವ್ಯಾಲಿ ಯೋಜನೆಯ ಮೂಲಕ ಕೊಳಚೆ ನೀರನ್ನು 2 ಹಂತದಲ್ಲಿ ಸಂಸ್ಕರಿಸಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಕೆರೆಗಳಿಗೆ ಬಿಡುತ್ತಿರುವ ಬಗ್ಗೆ ಪ್ರಶ್ನೆ ಕೇಳಿದ್ದ ಸಮೃದ್ಧಿ ಮಂಜುನಾಥ್ ಅವರು, ಈ ಜಿಲ್ಲೆಗಳಿಗೆ ಬಿಡುತ್ತಿರುವ ನೀರು ವಿಷವಾಗಿದೆ. ಮುಂದಿನ ಪೀಳಿಗೆಗೆ ನಾವು ಇಂತಹ ವಿಷದ ನೀರನ್ನು ಕೊಡುವುದು ಬೇಡ. 3ನೇ ಹಂತದಲ್ಲಿ ಕೊಳಚೆ ನೀರನ್ನು ಸಂಸ್ಕರಿಸಿ ಎಂದು ಒತ್ತಾಯಿಸಿ, ಬೆಂಗಳೂರಿಗೆ ಒದಗಿಸುತ್ತಿರುವ ನೀರು ಹಾಗೂ ಕೆ.ಸಿ. ವ್ಯಾಲಿ ಯೋಜನೆ ಮೂಲಕ ಒದಗಿಸುತ್ತಿರುವ ನೀರಿನ ಎರಡು ಬಾಟಲ್‌ಗಳನ್ನು ಸದನದಲ್ಲಿ ಪ್ರದರ್ಶಿಸಿದರು.

ಜೆಡಿಎಸ್‌ನ ಸಮೃದ್ಧಿ ಮಂಜುನಾಥ್ ರವರು ನೀರಿನ ಬಾಟಲ್‌ಗಳನ್ನು ಪ್ರದರ್ಶಿಸಿದ್ದಕ್ಕೆ ಸಭಾಧ್ಯಕ್ಷ ಯು.ಟಿ. ಖಾದರ್ ಅಸಮಾಧಾನ ವ್ಯಕ್ತಪಡಿಸಿ, ಈ ರೀತಿ ಸದನದಲ್ಲಿ ಮಾಡುವುದು ಸರಿಯಲ್ಲ. ನಿಯಮಾವಳಿಗಳಂತೆ ನಡೆದುಕೊಳ್ಳಿ. ಏನೇ ಹೇಳುವುದಿದ್ದರೂ ಪ್ರಶ್ನೆ ಕೇಳಿ. ಈ ರೀತಿ ಸದನಕ್ಕೆ ನೀರಿನ ಬಾಟಲ್‌ಗಳನ್ನು ತರುವುದು ಸರಿಯಲ್ಲ ಎಂದರು.ಜೆಡಿಎಸ್ ಸದಸ್ಯರ ಪ್ರಶ್ನೆಗೆ ಉತ್ತರ ನೀಡಿದ್ ಸಚಿವ ಭೋಸರಾಜು ಅವರು, ಎರಡು ಜಿಲ್ಲೆಗಳ ಶಾಸಕರ ಸಭೆ ಕರೆದು ಈ ಬಗ್ಗೆ ಚರ್ಚಿಸಿದ್ದೇವೆ. ನೀರನ್ನು ಅಂತರ್ಜಲ ಹೆಚ್ಚಿಸಲು ಮಾತ್ರ ಬಳಕೆ ಮಾಡಲಾಗುತ್ತಿದೆ. ಕುಡಿಯಲು ಬಳಸುತ್ತಿಲ್ಲ. ಹಾಗಾಗಿ 2 ಹಂತಗಳಲ್ಲಿ ಸಂಸ್ಕರಿಸಿ ಕೆರೆ ತುಂಬಿಸಲಾಗುತ್ತಿದೆ ಎಂದು ಹೇಳಿದರು.

ಇಷ್ಟಾದರೂ ಜೆಡಿಎಸ್‌ನ ಸಮೃದ್ಧಿ ಮಂಜುನಾಥ್ ಅವರು ನೀರಿನ ಗುಣಮಟ್ಟ ಸರಿಯಿಲ್ಲ ಎಂದು ಹೇಳುತ್ತಲೇ ಇದ್ದರು. ಆಗ ಕಂದಾಯ ಸಚಿವ ಕೃಷ್ಣಬೈರೇಗೌಡ ಎದ್ದುನಿಂತ ಸಚಿವ ಭೋಸರಾಜು ರವರ ಅನುಮತಿ ಮೇರೆಗೆ ಉತ್ತರ ಕೊಡುತ್ತೇನೆ ಎಂದು ಹೇಳಿ, ಕೆ.ಸಿ. ವ್ಯಾಲಿ ಯೋಜನೆ ಮೂಲಕ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕೊಳಚೆ ನೀರನ್ನು 2 ಹಂತಗಳಲ್ಲಿ ಸಂಸ್ಕರಿಸಿ ಕೆರೆ ತುಂಬಿಸುತ್ತಿದ್ದೇವೆ. ಸದಸ್ಯರು ಯಾವುದೇ ವೈಜ್ಞಾನಿಕ ಆಧಾರ ಇಲ್ಲದೆ ಸುಮ್ಮನೆ ಈ ಬಗ್ಗೆ ಅಪಪ್ರಚಾರ ಮಾಡಿ ತಪ್ಪು ಅಭಿಪ್ರಾಯ ಮೂಡಿಸುವುದು ಸರಿಯಲ್ಲ. ಪ್ರತಿ 3 ತಿಂಗಳಿಗೊಮ್ಮೆ ದೇಶದಲ್ಲೇ ಪ್ರತಿಷ್ಠಿತ ಸಂಸ್ಥೆಯಾದ ಭಾರತೀಯ ವಿಜ್ಞಾನ ಸಂಸ್ಥೆಯಿಂದ ಕೆ.ಸಿ. ವ್ಯಾಲಿ ನೀರನ್ನು ಪರೀಕ್ಷಿಸಲಾಗುತ್ತಿದೆ.

ಬೆಳೆ ಪರೀಕ್ಷೆಯನ್ನು ಮಾಡಲಾಗುತ್ತಿದೆ. ಮತ್ತೆ ನೀರಿನ ಪರೀಕ್ಷೆ ಮತ್ತು ಬೆಳೆ ಪರೀಕ್ಷೆಯನ್ನು 5 ವರ್ಷಗಳಿಗೆ ವಿಸ್ತರಿಸಿದ್ದೇವೆ. ಅನಗತ್ಯವಾಗಿ ಆಧಾರ ಇಲ್ಲದೆ ವೈಜ್ಞಾನಿಕ ಸಂಸ್ಥೆಗಳ ವರದಿಗಳಿಲ್ಲದೆ ಈ ರೀತಿ ಸದನದಲ್ಲಿ ಮಾತನಾಡುವುದು ಸರಿಯಲ್ಲ. ಸದಸ್ಯರು ರಾಜಕೀಯ ಪಕ್ಷದ ಹೆಸರು ಉಲ್ಲೇಖಿಸಿದ್ದಾರೆ. ಹಾಗಾಗಿ ನಾನು ಮಾತನಾಡುತ್ತಿದ್ದೇನೆ. 2006 ರಲ್ಲಿ ಭದ್ರಾ ನದಿಯಿಂದ ಕೋಲಾರ ಜಿಲ್ಲೆಯಿಂದ ನೀರು ತರುತ್ತೇವೆ ಎಂದು ಗುದ್ದಲಿ ಪೂಜೆ ಮಾಡಿದವರು ಯಾರು, ಅಧಿಕಾರದಲ್ಲಿದ್ದಾಗ ಏನನ್ನೂ ಮಾತನಾಡದೇ ಈಗ ಮಾತನಾಡುವುದು ಸರಿಯಲ್ಲ ಎಂದು ಅಸಮಾಧಾನ ಹೊರ ಹಾಕಿದರು.

ಕೆ.ಸಿ. ವ್ಯಾಲಿಯಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ವಿಶ್ವಬ್ಯಾಂಕ್, ಕೇಂದ್ರ ಸರ್ಕಾರದ ಜಲಸಂಪನ್ಮೂಲ ಇಲಾಖೆ. ವಿಶ್ವಸಂಸ್ಥೆ ಎಲ್ಲವೂ ಶ್ಲಾಘಿಸಿವೆ. ವಿಶ್ವಬ್ಯಾಂಕ್ ಈ ಯೋಜನೆಯನ್ನು ಮೆಚ್ಚಿ ಈ ಯೋಜನೆ ವಿಸ್ತರಣೆಗೆ ಸಾಲವನ್ನು ನೀಡಿದೆ. ಈ ಹಿಂದೆ ಬಿಜೆಪಿ ಸರ್ಕಾರ ಇದ್ದಾಗ ಮಾಧುಸ್ವಾಮಿ ಅವರು ಅಂದಿನ ಮುಖ್ಯಮಂತ್ರಿ ಬಸವರಾಜು ಬೊಮ್ಮಾಯಿರವರನ್ನು ಒಪ್ಪಿಸಿ ವೃಷಭಾವತಿ ಕಣಿವೆ ಮೂಲಕ ತುಮಕೂರಿನವರೆಗೂ ಕೆರೆಗಳನ್ನು ತುಂಬಿಸುವ ಯೋಜನೆಯನ್ನು ರೂಪಿಸಿದ್ದರು ಎಂದರು.

ಈ ಹಿಂದೆ ಕಾಂಗ್ರೆಸ್ ಸರ್ಕಾರವಿದ್ದಾಗ ಡಿ.ಕೆ. ಶಿವಕುಮಾರ್ ಅವರು ಜಲಸಂಪನ್ಮೂಲ ಸಚಿವರಾಗಿದ್ದಾಗ ಕೇಂದ್ರ ಸರ್ಕಾರ ಆಗಿನ ಜಲಸಂಪನ್ಮೂ ಸಚಿವರೇ ಕೆ.ಸಿ. ವ್ಯಾಲಿ ಯೋಜನೆಯ ಸ್ಥಳಕ್ಕೆ ಭೇಟಿ ನೀಡಿ ಈ ಯೋಜನೆ ಇಡೀ ರಾಷ್ಟ್ರಕ್ಕೆ ಅನ್ವಯಿಸುವ ಯೋಜನೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದರು. ಹೀಗಿರುವಾಗ ಈ ಯೋಜನೆಯ ಬಗ್ಗೆ ಅಪಪ್ರಚಾರ ಮೂಡಿಸುವ ರೀತಿಯಲ್ಲಿ ಯಾವುದೇ ವೈಜ್ಞಾನಿಕ ಆಧಾರ ಇಲ್ಲದೆ ಮಾತನಾಡುವುದು ಸರಿಯಲ್ಲ ಎಂದು ಹೇಳಿದರು.ನಾವು ಈ ಯೋಜನೆಯ ಸುಧಾರಣೆಗೆ ತೆರೆದ ಮನಸ್ಸು ಹೊಂದಿದ್ದೇವೆ. ಸುಧಾರಣೆಗಳಿದ್ದರೆ ಹೇಳಲಿ, ಸುಮ್ಮನೆ ರಾಜಕೀಯ ಕಾರಣಗಳಿಗೆ ಸದನದಲ್ಲಿ ಮಾತನಾಡುವುದು ಸರಿಯಲ್ಲ ಎಂದು ಕೃಷ್ಣಬೈರೇಗೌಡ ಹೇಳಿದರು.

ಈ ಹಂತದಲ್ಲಿ ಮಧ್ಯೆ ಪ್ರವೇಶಿಸಿ ಮಾತನಾಡಿದ ಸಚಿವ ಕೆ.ಹೆಚ್. ಮುನಿಯಪ್ಪ ಅವರು ಕೆ.ಸಿ. ವ್ಯಾಲಿ ಮೂಲಕ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕೆರೆ ತುಂಬಿಸುವ ಯೋಜನೆಯನ್ನು ಪಕ್ಷಾತೀತವಾಗಿ ಎಲ್ಲಾ ಶಾಸಕರ ಜತೆ ಚರ್ಚಿಸಿಯೇ ಮಾಡಿದ್ದೇವೆ. ಇದು ಕುಡಿಯುವ ನೀರಿಗೆ ರೂಪಿಸಿ ಯೋಜನೆಯಲ್ಲ. ಕುಡಿಯುವ ನೀರಿಗೆ ಎತ್ತಿನಹೊಳೆ ಯೋಜನೆಯನ್ನು ಮಾಡಿದ್ದೇವೆ. ಇದು ಕೆರೆ ತುಂಬಿಸುವ ಮಾಡಿರುವ ಯೋಜನೆ. ಕುಡಿಯುವ ನೀರಿಗಾದರೆ 3 ಹಂತದ ಸಂಸ್ಕರಣೆ ಬೇಕು. ಕೆರೆ ತುಂಬಿಸುವ ಯೋಜನೆಗೆ 2 ಹಂತದ ಸಂಸ್ಕರಣೆ ಸಾಕು. ಈ ಬಗ್ಗೆ ಶಾಸಕರಿಗೆ ಅರಿವು ಮೂಡಿಸಲು ಎರಡು ಜಿಲ್ಲೆಗಳ ಶಾಸಕರ ಸಭೆ ಕರೆಯುವಂತೆ ಸಚಿವ ಭೋಸರಾಜುರವರಿಗೆ ಮನವಿ ಮಾಡಿದರು.

# ಅಭಿವೃದ್ಧಿ ಕೆಲಸ ಮಾತ್ರ ಉಳಿಯುತ್ತವೆ; ಮುರಳಿ



**ಕೋಲಾರ,ಮಾ.10–:** ಶಾಸಕ ಕೊತ್ತೂರು ಮಂಜುನಾಥ್ ಅವರು ಈ ಭಾಗದ ಶಾಸಕರಾದಾಗಿನಿಂದ ತಾಲೂಕಿನಲ್ಲಿ ಬಹಳಷ್ಟು ಅಭಿವೃದ್ಧಿ ಕಾಮಗಾರಿಗಳು ದಿನನಿತ್ಯ ಆಗುತ್ತಲೇ ಇವೆ. ಈಗಾಗಲೇ ಹಲವಾರು ಕಾಮಗಾರಿಗಳು ಹಳ್ಳಿಗಳಲ್ಲಿ ಗುದ್ದಲಿಪೂಜೆ ನೆರವೇರಿಸಿದ್ದು ಆ ಕಾಮಗಾರಿಗಳು ಚಾಲನೆಯಲ್ಲಿವೆ. ಕೇವಲ ಆರು ತಿಂಗಳಲ್ಲಿ ಕಾಮಗಾರಿಗಳಿಗೆ ಶಾಸಕರೇ ಉದ್ಘಾಟನೆ ಮಾಡಲಿದ್ದಾರೆ. ಇಷ್ಟೆಲ್ಲಾ ಅಭಿವೃದ್ಧಿ ಕೆಲಸಗಳು ಮಾಡುತ್ತಿದ್ದರು ವಿರೋಧ ಪಕ್ಷದ ನಾಯಕರು ಟೀಕೆಗಳು ಮಾಡುತ್ತಲೇ ಇದ್ದಾರೆ. ಅವರ ಟೀಕೆಗಳು ಅಳಿಯುತ್ತವೆ ಅಭಿವೃದ್ಧಿ ಕೆಲಸಗಳು ಮಾತ್ರ ಉಳಿಯುತ್ತವೆ. ಮುಂದಿನ ಚುನಾವಣೆಗಳಲ್ಲಿ ಜನಸಾಮಾನ್ಯರು ಇದಕ್ಕೆ ಉತ್ತರ ನೀಡಲಿದ್ದಾರೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ ಹೇಳಿದರು.

ತಾಲೂಕಿನ ಸುಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗರುಡನಹಳ್ಳಿ ಗ್ರಾಮದ ಕೆರೆ ಕಟ್ಟೆ ಶಾಸಕರ ಅನುದಾನದಲ್ಲಿ ಅಂದಾಜು ಮೊತ್ತ 1.40 ಲಕ್ಷ ರೂ ಗಳಲ್ಲಿ ನಿರ್ಮಾಣವಾಗುತ್ತಿದ್ದು ಕಾಮಗಾರಿ ಪರಿಶೀಲನೆ ಮಾಡಿ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿ ಶಾಸಕ ಕೊತ್ತೂರು ಮಂಜುನಾಥ್ ಅವರು ಪ್ರತಿದಿನ ತಾಲೂಕಿನ ಬಗ್ಗೆ ಚಿಂತನೆ ಮಾಡುತ್ತಾರೆ. ಪ್ರತಿ ಗ್ರಾಮ ಪಂಚಾಯಿತಿ ಹಂತದಲ್ಲಿ ಎರಡರಿಂದ ಮೂರು ಡಾಂಬರ್ ರಸ್ತೆಗಳ ಕಾಮಗಾರಿ ಪ್ರಾರಂಭ ಆಗಿದೆ. ಈ ಹಿಂದೆಂದೂ ಆಗದಂತ ಅಭಿವೃದ್ಧಿ ಕೆಲಸಗಳು ಈಗ ಆಗುತ್ತಿವೆ. ಗುಣಮಟ್ಟದ ಕೆಲಸ ಸಹ ಆಗುತ್ತಿದೆ. ಸುಲೂರು ಪಂಚಾಯಿತಿಗೆ ಹೆಚ್ಚಿನ ಅನುದಾನ ನೀಡಿದ್ದಾರೆ. ಇಂತಹ ಅಭಿವೃದ್ಧಿ ನಾಯಕನ ಕುರಿತು ಟೀಕೆ ಮಾಡುವುದು ಎಷ್ಟು ಸರಿ ಎಂದು ಪ್ರಶ್ನೆ ಹಾಕಿದರು.

ನಂತರ ಸುಲೂರು ಮಾಜಿ ಅಧ್ಯಕ್ಷ ಸುರೇಶ್ ಕುಮಾರ್ ಮಾತನಾಡಿ, ಗರುಡನಹಳ್ಳಿ ಗ್ರಾಮದಲ್ಲಿ ಸುಮಾರು 400 ಕ್ಕೂ ಹೆಚ್ಚಿನ ಮನೆಗಳಿವೆ. ಬಹಳ ದೊಡ್ಡ ಗ್ರಾಮವಿದು. ಕೋಲಾರ ಚಿಕ್ಕಬಳ್ಳಾಪುರ ಮುಖ್ಯರಸ್ತೆಯಿಂದಲೇ ಈ ಗ್ರಾಮಕ್ಕೆ ಬರಬೇಕು. ಇದೊಂದೇ ರಸ್ತೆ ಮಾರ್ಗ ಇವರಿಗೆ ಇರುವುದು. ಈ ಕೆರೆ ಕಟ್ಟೆ ಮೇಲೆಯೇ ಹೋಗಬೇಕು. ಕಟ್ಟೆ ರಸ್ತೆ ಮೇಲೆ ಮಳೆ ಬಿದ್ದು ಸಾಕಷ್ಟು ಹಳ್ಳಗಳಿದ್ದು ದಿನನಿತ್ಯ ತುಂಬಾನೇ ಕಷ್ಟ ಪಡುತ್ತಿದ್ದರು. ಶಾಸಕರ ಬಳಿ ಸಿಮೆಂಟ್ ರಸ್ತೆ ಬೇಕೆಂದು ಒತ್ತಾಯ ಮಾಡುತ್ತಿದ್ದನ್ನು ನೆನಪಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ಜಿಲ್ಲಾ ಉಸ್ತುವಾರಿ ಬಿ ಸುರೇಶ್, ಸಹಕಾರದೊಂದಿಗೆ ಶಾಸಕ ಕೊತ್ತೂರು ಮಂಜುನಾಥ್ ಅವರು ಹೆಚ್ಚಿನ ಅನುದಾನ ತಂದು ತಾಲೂಕಿನ ಅಭಿವೃದ್ಧಿ ಮಾಡುತ್ತಿದ್ದಾರೆ.

ಈ ಕಾರ್ಯಕ್ಕೆ ಮುಖ್ಯಮಂತ್ರಿ ಕಾರ್ಯದರ್ಶಿಗಳಾದ ನಸೀರ್ ಅಹಮದ್ ಮತ್ತು ವಿಧಾನ ಪರಿಷತ್ ಸದಸ್ಯ ಎಂ ಎಲ್ ಅನಿಲ್ ಕುಮಾರ್ ಅವರು ಸರ್ಕಾರಕ್ಕೆ ಒತ್ತಡ ಹಾಕಿ ಶ್ರಮ ವಹಿಸಿದ್ದಾರೆ. ನಮ್ಮ ಗ್ರಾಮ ಪಂಚಾಯಿತಿಗೆ ಹೆಚ್ಚಿನ ಅಭಿವೃದ್ಧಿ ಕೆಲಸಗಳು ಮಾಡಿರುವುದು ನಮ್ಮೆಲ್ಲರ ಅದೃಷ್ಟ. ಈ ರಸ್ತೆಗೂ ಸಹ ಹೆಚ್ಚಾಗಿ ಅನುದಾನ ತಂದಿದ್ದಾರೆ. ಗುಣಮಟ್ಟದಲ್ಲಿ ಯಾವುದೇ ರೀತಿ ಕಳಪೆಯಿಲ್ಲದೆ ಉತ್ತಮ ರಸ್ತೆ ನಿರ್ಮಾಣ ಆಗುತ್ತಿದೆ. ಸುಮಾರು 50 ವರ್ಷಗಳ ಕಾಲ ಈ ರಸ್ತೆಗೆ ಯಾವುದೇ ಸಣ್ಣ ಡ್ಯಾಮೇಜ್ ಸಹ ಆಗೋದಿಲ್ಲ ಎಂದು ಭರವಸೆ ನೀಡಿದರು.

ಗ್ರಾಮಸ್ಥರು ಮಾತನಾಡಿ ನಮ್ಮ ಬಹು ವರ್ಷಗಳ ಬೇಡಿಕೆಯಾಗಿತ್ತು, ಸುಮಾರು ವರ್ಷಗಳಿಂದ ಹೇಳುತ್ತಲೇ ಬಂದಿದ್ದೇವೆ. ಅಧಿಕಾರಕ್ಕೆ ಬಂದಂತ ಇತರೆ ಪಕ್ಷದವರು ಈ ಕೆಲಸ ಮಾಡಲೇ ಇಲ್ಲ. ನಮ್ಮ ಗ್ರಾಮಕ್ಕೆ ಇದೊಂದೇ ರಸ್ತೆ ಇರೋದು. ಮಳೆ ಬಿದ್ದಾಗ ವಾಹನ ಸಂಚಾರಕ್ಕೆ ಬಹಳ ಹಿಂಸೆಯಾಗುತ್ತಿತ್ತು. ಹಳ್ಳ ರಸ್ತೆಯಲ್ಲಿ ಸಾಕಷ್ಟು ಜನ ಬಿದ್ದು ಗಾಯಗೊಂಡಿರುವ ಉದಾಹರಣೆಗಳಿವೆ. ಈ ಪರಿಸ್ಥಿತಿಯನ್ನ ಸುಲೂರು ಮಾಜಿ ಅಧ್ಯಕ್ಷರು ಮತ್ತು ಬ್ಲಾಕ್ ಕಾಂಗ್ರೆಸ್ ಮುರಳಿ ಅವರ ಬಳಿ ಗ್ರಾಮಸ್ಥರು ಹೇಳಿದಾಗ ಶಾಸಕ ಕೊತ್ತೂರು ಮಂಜುನಾಥ್ ಅವರ ಬಳಿ ಮಾತಾಡಿ ಒಳ್ಳೆ ಗುಣಮಟ್ಟ ಸಿಮೆಂಟ್ ರಸ್ತೆ ಮಾಡುತ್ತಿದ್ದಾರೆ ಇದು ತುಂಬಾ ಸಂತೋಷ ಕೊಡುತ್ತಿದೆ ಎಂದರು.

ಈ ಸಂದರ್ಭದಲ್ಲಿ ಯೋಜನಾ ಪ್ರಾಧಿಕಾರ ಸದಸ್ಯ ರಾಮಸಂದ್ರ ಕುಮಾರ್, ಬ್ಲಾಕ್ ಕಾಂಗ್ರೆಸ್ ಸದಸ್ಯ ವೀರೇಂದ್ರ ಪಾಟೀಲ್, ತಾಲೂಕು ಕೆಡಿಪಿ ಸದಸ್ಯ ಯಲವಾರ ರಾಜ್ ಕುಮಾರ್, ದಿಂಬ ಚಾಮನಹಳ್ಳಿ ನಾರಾಯಣ ಸ್ವಾಮಿ, ಗರುಡನಹಳ್ಳಿ ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಬಾಬು, ಕಂಡೆಕ್ಟರ್ ನಾರಾಯಣಸ್ವಾಮಿ, ನದಿಮ್, ಚಿನ್ನಾಪುರ ನಾರಾಯಣ ಸ್ವಾಮಿ, ಗ್ರಾಮಸ್ಥರಾದ ರಾಜಣ್ಣ, ಪಿಳ್ಳಪ್ಪ ನಾಯಕ, ಸೋಮಶೇಖರ್, ಶ್ರೀರಾಮ್, ಉಸ್ಮಾನ್ ಸಾಭಿ, ಪೈರೋಜ್, ವೆಂಕಟ ರಾಮಪ್ಪ, ವೆಂಕಟೇಶ್, ನಾಗರಾಜ್, ಮುರಳೀಧರ, ಆಟೋ ಮುನಿರಾಜು, ನಾರಾಯಣ ಸ್ವಾಮಿ, ರಘು, ಆನಂತಪ್ಪ, ಲಕ್ಕಯ್ಯ, ಗೋವಿಂದಪ್ಪ, ಸೇರಿದಂತೆ ಗರುಡನಹಳ್ಳಿ ಗ್ರಾಮಸ್ಥರು ಇತರರು ಇದ್ದರು.

# ಹಲವೆಡೆ ಹೋಟೆಲ್ ಬಂದ್






**ನವದೆಹಲಿ, ಮಾ.10–** ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಉದ್ವಿಗ್ನತೆ ಹಿನ್ನೆಲೆಯಲ್ಲಿ ಬೆಂಗಳೂರು, ಮುಂಬೈ, ಕೋಲ್ಕತ್ತಾ ಸೇರಿದಂತೆ ದೇಶದ ಮಹಾನಗರಗಳಲ್ಲಿ ಎಲ್‌ಪಿಜಿ ಪೂರೈಕೆಯಲ್ಲಿ ಅಡಚಣೆಯಾಗಿದೆ. ಈ ಹೀಗಾಗಿ ದೇಶೀಯ ಬಳಕೆಗಾಗಿ ಉತ್ಪಾದನೆ ಹೆಚ್ಚಿಸಲು ಕೇಂದ್ರ ಸರ್ಕಾರ ಆದೇಶಿಸಿದೆ.

ದೇಶದ ವಾಣಿಜ್ಯ ರಾಜಧಾನಿ ಮುಂಬೈನಲ್ಲಿ ಎಲ್ ಪಿಜಿ ಕೊರತೆಯಿಂದ ಶೇಕಡಾ 20 ರಷ್ಟು ಹೊಟೆಲ್ ಬಂದ್ ಮಾಡಲಾಗಿದೆ. ಜೊತೆಗೆ ಬೆಂಗಳೂರು, ಚೆನ್ನೈ, ಕೋಲ್ಕತ್ತಾ ಸೇರಿದಂತೆ ಇನ್ನಿತರೆ ನಗರಗಳ ಹೋಟೆಲ್ ಗಳ ಮೇಲೂ ಗಂಭೀರ ಪರಿಣಾಮ ಬೀರಿದೆ.

ಎಲ್ ಪಿಜಿ ಸಿಲಿಂಡರ್ ಕೊರತೆಯಿಂದ ಮುಂಬೈನ ವಡಾ ಪಾವ್, ಬೆಂಗಳೂರಿನ ಮಸಾಲೆ ದೋಸೆ ಸೇರಿದಂತೆ ವಿವಿಧ. ನಗರಗಳಲ್ಲಿನ ಜನಪ್ರಿಯ ತಿಂಡಿಗಳು ಆಹಾರ ಪ್ರಿಯರಿಗೆ ಸಿಗದ ಪರಿಸ್ಥಿತಿ ನಿರ್ಮಾಣವಾಗಿದೆ. ಕೆಲವೆಡೆ ಸಿಲಿಂಡರ್ ಅಬಾವದಿಂದ ಹೋಟೆಲ್ ಮುಚ್ಚಲಾಗಿದೆ.

ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತೈಲ ಸಂಸ್ಕರಣಾಗಾರಗಳಿಗೆ ದ್ರವೀಕೃತ ಪೆಟ್ರೋಲಿಯಂ ಅನಿಲ  ಎಲ್‌ಪಿಜಿ ಉತ್ಪಾದನೆ ಹೆಚ್ಚಿಸಲು ಮತ್ತು ಹೆಚ್ಚುವರಿ ಉತ್ಪಾದನೆಯನ್ನು ನಿರ್ದಿಷ್ಟವಾಗಿ ದೇಶೀಯ ಬಳಕೆಗೆ ನಿರ್ದೇಶಿಸಲು ನಿರ್ದೇಶನ ನೀಡಿದೆ.

ಜಾಗತಿಕ ಇಂಧನ ಪೂರೈಕೆ ಸರಪಳಿಯನ್ನು ಅಡ್ಡಿಪಡಿಸಿದ ಇತ್ತೀಚಿನ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳಿಗೆ ಪ್ರತಿಕ್ರಿಯೆಯಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಪೆಟ್ರೋಲಿಯಂ ಸಚಿವಾಲಯ ಹೇಳಿದೆ

ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದಾಗಿ ಜಾಗತಿಕ ತೈಲ ಮತ್ತು ಇಂಧನ ಮಾರುಕಟ್ಟೆಗಳಲ್ಲಿ ನಡೆಯುತ್ತಿರುವ ಅನಿಶ್ಚಿತತೆಯ ಮಧ್ಯೆ, ನಾಗರಿಕರಿಗೆ ಇಂಧನ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಮನೆಗಳಿಗೆ ಎಲ್‌ಪಿಜಿ ಪೂರೈಕೆಗೆ ಆದ್ಯತೆ ನೀಡಿದೆ. ಹೀಗಾಗಿ ದೇಶೀಯ ನೈಸರ್ಗಿಕ ಅನಿಲ ಉತ್ಪಾದನೆ ಹೆಚ್ಚಳ ಮಾಡುವಂತೆ ನಿರ್ದೇಶಿಸಿದೆ.

"ಇಂಧನ ಪೂರೈಕೆಯಲ್ಲಿನ ಪ್ರಸ್ತುತ ಭೌಗೋಳಿಕ ರಾಜಕೀಯ ಅಡೆತಡೆಗಳು ಮತ್ತು ಎಲ್‌ಪಿಜಿ ಪೂರೈಕೆಯ ಮೇಲಿನ ನಿರ್ಬಂಧಗಳ ಹಿನ್ನೆಲೆಯಲ್ಲಿ, ಸಚಿವಾಲಯು ತೈಲ ಸಂಸ್ಕರಣಾಗಾರಗಳಿಗೆ ಹೆಚ್ಚಿನ ಎಲ್‌ಪಿಜಿ ಉತ್ಪಾದನೆಗಾಗಿ ಮತ್ತು ಅಂತಹ ಹೆಚ್ಚುವರಿ ಉತ್ಪಾದನೆಯನ್ನು ದೇಶೀಯ ಎಲ್‌ಪಿಜಿ ಬಳಕೆಗೆ ಬಳಸಲು ಆದೇಶಗಳನ್ನು ಹೊರಡಿಸಿದೆ" ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಪ್ರಕಟಿಸಿದೆ.

ಪ್ರಸ್ತುತ ಪೂರೈಕೆ ವಾತಾವರಣ ನಿರ್ವಹಿಸಲು, ಗ್ರಾಹಕರು ಸಂಗ್ರಹಣೆ ತಪ್ಪಿಸಲು ಮತ್ತು ಕಾಳ ಸಂತೆಯಲ್ಲಿ ಮಾರುಕಟ್ಟೆ ತಡೆಗಟ್ಟಲು ಸಚಿವಾಲಯ 25 ದಿನಗಳ ಇಂಟರ್–ಬುಕಿಂಗ್ ಅವಧಿಯನ್ನು ಪರಿಚಯಿಸಿದ್ದ ಸಚಿವಾಲಯ ಮನೆಗಳಿಗೆ ದೇಶೀಯ ಎಲ್ ಪಿಜಿ ಪೂರೈಕೆಗೆ ಆದ್ಯತೆ ನೀಡಿದೆ

ಆಮದು ಮಾಡಿಕೊಂಡ ಇಂಧನ ವಿತರಣೆಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರ ದೇಶೀಯವಲ್ಲದ ವಲಯಗಳಿಗೆ ನಿರ್ದಿಷ್ಟ ಆದ್ಯತೆಗಳನ್ನು ನಿಗದಿಪಡಿಸಿದೆ.

"ಆಮದು ಮಾಡಿಕೊಂಡ ಎಲ್‌ಪಿಜಿಯಿಂದ ದೇಶೀಯವಲ್ಲದ ಪೂರೈಕೆಗಳಿಗೆ ಆಸ್ಪತ್ರೆಗಳು ಮತ್ತು ಶಿಕ್ಷಣ ಸಂಸ್ಥೆಗಳಂತಹ ಅಗತ್ಯ ದೇಶೀಯವಲ್ಲದ ವಲಯಗಳಿಗೆ ಆದ್ಯತೆ ನೀಡಲಾಗುತ್ತಿದೆ" ಎಂದು ಸಚಿವಾಲಯ ಹೇಳಿದ್ದು, "ಇತರ ದೇಶೀಯವಲ್ಲದ ವಲಯಗಳಿಗೆ ಎಲ್‌ಪಿಜಿ ಪೂರೈಕೆಗಾಗಿ, ರೆಸ್ಟೋರೆಂಟ್‌ಗಳು, ಹೋಟೆಲ್‌ಗಳು, ಇತರ ಕೈಗಾರಿಕೆಗಳಿಗೆ ಎಲ್‌ಪಿಜಿ ಪೂರೈಕೆಗಾಗಿ ಪ್ರಾತಿನಿಧ್ಯಗಳನ್ನು ಪರಿಶೀಲಿಸಲು ಮೂರು ಮಂದಿ ಹಿರಿಯ ಅಧಿಕಾರಿಗಳ ಸಮಿತಿ ರಚಿಸಲಾಗಿದೆ" ಎಂದು ಹೇಳಿದೆ.

ಮೆಟ್ರೋ ನಗರಗಳಲ್ಲಿ ಬಾರಿ ಹೊಡೆತ : ಪ್ರಧಾನಿಗೆ ಪತ್ರ

ಬೆಂಗಳೂರು ನಂತರ, ಚೆನ್ನೈ ಮತ್ತು ಮುಂಬೈ, ಕೋಲ್ಕತ್ತಾದಂತಹ ಮೆಟ್ರೋ ನಗರಗಳು ಸಹ ಎಲ್‌ಪಿಜಿ ಕೊರತೆಯ ಸಮಸ್ಯೆ ಎದುರಿಸಿದ್ದು ಸಮಸ್ಯೆಗೆ ಸಿಲುಕುವಂತಾಗಿದೆ

ಆಹಾರ ಉದ್ಯಮಕ್ಕೆ ಅಗತ್ಯ ವಸ್ತುಗಳ ಅಡಿಯಲ್ಲಿ ವಾಣಿಜ್ಯ ಎಲ್‌ಪಿಜಿಯನ್ನು ನಿರಂತರವಾಗಿ ಪೂರೈಸುವಂತೆ ಕೋರಿ ಚೆನ್ನೈ ಹೋಟೆಲ್‌ಗಳ ಸಂಘ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದೆ.

"ಪರಿಸ್ಥಿತಿ ಈಗ ಇನ್ನಷ್ಟು ಗಂಭೀರವಾಗಿದೆ. ವಾಣಿಜ್ಯ ಎಲ್‌ಪಿಜಿ ವಿತರಕರು ಸಿಲಿಂಡರ್‌ಗಳ ಪೂರೈಕೆಯನ್ನು ಸಂಪೂರ್ಣವಾಗಿ ನಿಲ್ಲಿಸಿದ್ದಾರೆ, ತಮ್ಮ ಬಳಿ ದಾಸ್ತಾನು ಲಭ್ಯವಿಲ್ಲ ಎಂದು ಹೇಳಿದ್ದಾರೆ. ಪರಿಣಾಮವಾಗಿ, ಅನೇಕ ರೆಸ್ಟೋರೆಂಟ್‌ಗಳನ್ನು ಮುಚ್ಚಲು ಒತ್ತಾಯಿಸಲಾಗಿದೆ" ಎಂದು ಅಸೋಸಿಯೇಷನ್ ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಮತ್ತು ಉಪ ಮುಖ್ಯಮಂತ್ರಿ ಉದಯನಿಧಿ ಅವರಿಗೆ ಸಾಮಾಜಿಕ ಜಾಲತಾಣದ ಮೂಲಕ ಮಾಹಿತಿ ನೀಡಲಾಗಿದೆ.

**ಕೇಂದ್ರಕ್ಕೆ ತೇಜಸ್ವಿ ಪತ್ರ**–ಎಲ್‌ಪಿಜಿ ಕೊರತೆ ಉಂಟಾಗಿರುವ ಹಿನ್ನೆಲೆಯಲ್ಲಿ ಕೇಂದ್ರ ಪೆಟ್ರೋಲಿಯಂ ಸಚಿವ ಹರ್ದೀಪ್ ಸಿಂಗ್ ಪುರಿಯವರಿಗೆ ಬಿಜೆಪಿ ಸಂಸದ ತೇಜಸ್ವಿಸೂರ್ಯ ಹಾಗೂ ಕೇಂದ್ರ ಸಚಿವೆ ಶೋಭಾ ಕರ್ದಲಂಜೆ ಸಮಸ್ಯೆ ಬಗೆಹರಿಸುವಂತೆ ಪ್ರತ್ಯೇಕವಾಗಿ ಪತ್ರ ಬರೆದಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ತೇಜಸ್ವಿ ಸೂರ್ಯ ಹೋಟೆಲ್ ಹಾಗೂ ಆತಿಥ್ಯ ಕ್ಷೇತ್ರಕ್ಕೆ ನಿರಂತರ ಎಲ್ ಪಿಜಿ ಪೂರೈಕೆ ಖಚಿತಪಡಿಸುವಂತೆ ಮನವಿ ಮಾಡಿದ್ದಾರೆ.

ಹೋಟೆಲ್ ಮತ್ತು ರೆಸ್ಟೋರೆಂಟ್ ಕ್ಷೇತ್ರವು ದಿನನಿತ್ಯದ ಅಡುಗೆ ಕಾರ್ಯಗಳಿಗೆ ವಾಣಿಜ್ಯ ಎಲ್ ಪಿಜಿ ಅವಲಂಬಿತವಾಗಿದೆ. ಪಿಎನ್‌ಜಿ ಸಂಪರ್ಕ ಅಥವಾ ವಿದ್ಯುತ್ ಆಧಾರಿತ ಅಡುಗೆ ವ್ಯವಸ್ಥೆ ಲಭ್ಯವಿಲ್ಲದ ಕಾರಣ ಎಲ್ ಪಿಜಿ ಪೂರೈಕೆಯಲ್ಲಿ ವ್ಯತ್ಯಯ ಉಂಟಾದರೆ ಹೋಟೆಲ್ ಉದ್ಯಮ ಪರಿಣಾಮ ಬೀರುವ ಸಾಧ್ಯತೆಯಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಈ ಮಧ್ಯೆ ಕೇಂದ್ರ ಸಚಿವೆ ಶೋಭಾ ಕರ್ದಲಂದಾಜೆ ಅವರು ಎಲ್ ಪಿಜಿ ಪೂರೈಕೆಯಲ್ಲಿ ವ್ಯತ್ಯಯವಾಗಿರುವ ಬಗ್ಗೆ ಕೇಂದ್ರ ಸಚಿವರ ಗಮನಕ್ಕೆ ತಂದಿದ್ದಾರೆ. ಈ ಸಂಬಂಧ ಹೋಟೆಲ್ ಅಸೋಸಿಯನ್ ನೀಡಿರುವ ಮನವಿ ಪತ್ರವನ್ನು ಕೇಂದ್ರ ಸಚಿವರಿಗೆ ರವಾನಿಸಿದ್ದಾರೆ.

# ವಿದ್ಯಾರ್ಥಿಗಳು ಕ್ರೀಡಾ ಮನೋಭಾವ ಬೆಳೆಸಿಕೊಳ್ಳಲಿ: ಶರಣಗೌಡ ಪಾಟೀಲ್ ಬಯ್ಯಾಪೂರ

### ಅಂತರ ಕಾಲೇಜು ಪುರುಷರ ಖೋ–ಖೋ ತಂಡದ ಆಯ್ಕೆ ಪ್ರಕ್ರಿಯೆಗೆ ಚಾಲನೆ



ಧೈರ್ಯದ ದಾರಿ

**ಲಿಂಗಸುಗೂರು:** ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆದಿಕವಿ ಶ್ರೀ ವಾಲ್ಮೀಕಿ ವಿಶ್ವವಿದ್ಯಾಲಯದ ಅಂತರ ಕಾಲೇಜು ಪುರುಷರ ಖೋ–ಖೋ ತಂಡದ ಆಯ್ಕೆ ಪ್ರಕ್ರಿಯೆಗೆ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ ಬಯ್ಯಾಪೂರ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ವಿದ್ಯಾರ್ಥಿಗಳು ಕ್ರೀಡಾ ಮನೋಭಾವದಿಂದ ಆಟವಾಡಿ ಸಾಮರಸ್ಯವನ್ನು ಮೆರೆಯಬೇಕು. ಕ್ರೀಡೆಯಲ್ಲಿ ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸಿ ಪರಸ್ಪರ ಸ್ನೇಹ ಸಂಬಂಧವನ್ನು ಗಟ್ಟಿಗೊಳಿಸಬೇಕು ಎಂದು ಹೇಳಿದರು.

ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯ ಮುದುಕಪ್ಪ ನಾಯಕ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ವಿದ್ಯಾರ್ಥಿ ಜೀವನದಲ್ಲಿ ಕ್ರೀಡೆ ಅವಿಭಾಜ್ಯ ಅಂಗವಾಗಿದ್ದು, ಪಠ್ಯದ ಜೊತೆಗೆ ಕ್ರೀಡೆಯನ್ನೂ ಸಮಾನವಾಗಿ ಪ್ರೀತಿಸುವ ಗುಣ ಬೆಳೆಸಿಕೊಳ್ಳಬೇಕು ಎಂದರು. ಕಾಲೇಜು ಹಂತದಲ್ಲಿಯೇ ರಾಜ್ಯ, ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಲು ಇದು ಒಳ್ಳೆಯ ಅವಕಾಶವಾಗಿದ್ದು, ಧೈರ್ಯದಿಂದ ಕ್ರೀಡೆಯಲ್ಲಿ ಭಾಗವಹಿಸಬೇಕು ಎಂದು ಸಲಹೆ ನೀಡಿದರು.

ಗಣಕಯಂತ್ರ ವಿಭಾಗದ ಮುಖ್ಯಸ್ಥ ಡಾ. ಆರೀಫ್ ಉಲ್ಲಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾಲೇಜಿನ ಪ್ರಾಂಶುಪಾಲ ಡಾ. ವೆಂಕಟನಾರಾಯಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ಭೂಪನಗೌಡ ಕರಡಕಲ್, ದೈಹಿಕ ಶಿಕ್ಷಣ ನಿರ್ದೇಶಕ ಪ್ರಶಾಂತ ವೀರೇಶಗೌಡ, ಸಹ ಪ್ರಾಧ್ಯಾಪಕರಾದ ಡಾ. ಹನುಮಂತಪ್ಪ, ಡಾ. ಸಂಗನಗೌಡ ಸೇರಿದಂತೆ ಇದ್ದರು.

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಸಂಸ್ಕಾರ ನೀಡಬೇಕು: ಪಾಟೀಲ್



**ಚಿತ್ತಾಪುರ; ಮಾ.10:**ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸುವುದರ ಮೂಲಕ ಸಂಸ್ಕಾರ ನೀಡಬೇಕು ಎಂದು ಡಿವೈಎಸ್ಪಿ ಶಂಕರಗೌಡ ಪಾಟೀಲ್ ಹೇಳಿದರು.

ಪಟ್ಟಣದ ಹೊರವಲಯದ ಮಳಖೇಡ ರಸ್ತೆಯಲ್ಲಿರುವ ಜ್ಞಾನಗಂಗಾ ಶಿಕ್ಷಣ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿದ್ದ ಗ್ರೇಟ್ ಇಂಡಿಯಾ ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಾಲೆಯಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ಶಿಕ್ಷರರು ನೀಡುತ್ತಾರೆ. ಅದರ ಜೊತೆಗೆ ಮನೆಯಲ್ಲಿ ಪಾಲಕರಾದವರು ಕೂಡ ಮಕ್ಕಳಿಗೆ ಸಂಸ್ಕಾರವನ್ನು ಕಲಿಸುವುದು ಅಷ್ಟೇ ಮುಖ್ಯ ಎಂದರು.

ಶಿಕ್ಷಣ ಸಂಸ್ಥೆ ಕಟ್ಟುವುದು ಅಷ್ಟು ಸುಲಭದ ಮಾತಲ್ಲ. ಕಟ್ಟಿದ ಮೇಲೆ ಹೇಗೆ ಬೆಳೆಸಬೇಕು, ಹೇಗೆ ನಡೆಸಿಕೊಂಡು ಹೋಗಬೇಕು ಎನ್ನುವುದನ್ನು ಮನವರಿಕೆ ಮಾಡಿಕೊಂಡೆ ವಿಜಯಕುಮಾರ ಹಂಚಿನಾಳ ಅವರು ಇಷ್ಟು ದೊಡ್ಡ ಮಟ್ಟದ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸುವ ಮೂಲಕ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡಿ, ಶಿಕ್ಷಣ ಕ್ಷೇತ್ರದಲ್ಲಿ ಹಿಂದುಳಿದ ತಾಲೂಕು ಎನ್ನುವ ಹಣೆಪಟ್ಟಿಯನ್ನು ಹೊಗಲಾಡಿಸಿ, ವಿದ್ಯಾರ್ಥಿಗಳಿಗೆ ವಿದ್ಯಾವಂತವರನ್ನಾಗಿ ಮಾಡುವ ಛಲ ಹೊಂದಿದ್ದಾರೆ. ಹೀಗಾಗಿ ಇಲ್ಲಿ ಕಲಿತ ಮಕ್ಕಳೆಲ್ಲರೂ ಗುಣಮಟ್ಟದ ಶಿಕ್ಷಣವನ್ನು ಪಡೆದು ದೊಡ್ಡ ದೊಡ್ಡ ಹುದ್ದೆಗಳನ್ನು ಪಡೆಯುವುದರ ಮೂಲಕ ಕಲಿತ ಶಾಲೆಗೆ ಕಿರ್ತಿ ತರಬೇಕು ಎಂದರು.

ರಾಯಚೂರಿನ ಕೃಷಿ ವಿಶ್ವವಿದ್ಯಾಲಯದ ನಿವೃತ್ತ ಉಪ ಕುಲಪತಿ ಡಾ.ಮಹಾಂತಗೌಡ ಪಾಟೀಲ್ ಮಾತನಾಡಿ, ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಓದಿನ ಕಡೆ ಹೆಚ್ಚಿನ ಒತ್ತು ನೀಡಬೇಕು. ಗುರುಗಳು ಕಲಿಸಿದ ವಿದ್ಯೆಯನ್ನು ವಿದ್ಯಾರ್ಥಿಗಳು ಚಾಚು ತಪ್ಪದೇ ಕಲಿಯಬೇಕು ಎಂದರು.

ಗುಲ್ಬರ್ಗ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಮಲ್ಲಣ್ಣ ಮಡಿವಾಳ ಮಾತನಾಡಿದರು.

ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಉಪ–ನಿರ್ದೇಶಕ ಕಚೇರಿಯ ವಿ.ಎಂ.ಪತ್ತಾರ್, ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿ ಶಿವಶರಣಪ್ಪ ಬನ್ನಿಕಟ್ಟಿ, ಕರಬಸಪ್ಪ ಮಾಲಿ ಪಾಟೀಲ್, ನಿವೃತ ಮುಖ್ಯಗುರು ಯಶವಂತರಾವ್ ಬಿರಾದಾರ್, ಸಂಸ್ಥೆಯ ಸಂಸ್ಥಾಪಕ ವಿಜಯಕುಮಾರ ಹಂಚಿನಾಳ, ಅಧ್ಯಕ್ಷ ಪ್ರಕಾಶ ಹಂಚಿನಾಳ, ಸಂಸ್ಥೆ ಕಾರ್ಯದರ್ಶಿ ಪ್ರಶಾಂತ್ ಪಾಟೀಲ್, ಆಡಳಿತಾಧಿಕಾರಿ ಶೃತಿ ಪಾಟೀಲ್, ಮುಖ್ಯಗುರ ಗುರುರಾಜ ರಾವೂರ ವೇದಿಕೆಯಲ್ಲಿದ್ದರು.

ಕಾರ್ಯಮಕ್ರದಲ್ಲಿ ಬಿಜೆಪಿ ತಾಲೂಕು ಅಧ್ಯಕ್ಷ ರವಿಂದ್ರ ಸಜ್ಜನಶೇಟ್ಟಿ, ರಮೇಶ ಬಟಗೇರಿ, ಶಿವಮುದ್ರಪ್ಪ ಸಣ್ಣೂರಕರ, ಡಿ.ಕೆ.ಪಾಟೀಲ್, ಡಾ.ದಾವೂದ ಪಟೇಲ್, ರಾಜಶೇಖರ ತಿಮ್ಮನಾಯಕ್, ರಾಜಶೇಖರ ಬಳ್ಳಾ, ರವಿ ಅಬ್ಬಿಗೇರಿ, ವಿರಸಂಗಪ್ಪ ಸುಲೇಗಾಂವ, ಶೃತಿ ಡಿ. ಹೆಬ್ಬಾಳ, ಕಾವೇರಿ ದರಪುರ್ ಇದ್ದರು.

ಶಿಕ್ಷಕ ಜೋಸೇಫ್ ನಿರೂಪಿಸಿದರು. ನಾಗರತ್ನ ವಂದಿಸಿದರು.

# ಸಂಘಟನೆ ಜನಸಾಮಾನ್ಯರ ಧ್ವನಿಯಾಗಲಿ :ಬಾಬುರಾವ ಪಾಸ್ವಾನ



**ಬೀದರ :ಮಾ.10–** ನಗರದ ಹಲವಾಯಿ ಕಾಂಪ್ಲೆಕ್ಸನಲ್ಲಿ ವೀರ ಕನ್ನಡಿಗರ ಸೇನೆ ಜಿಲ್ಲಾ ಕೇಂದ್ರ ಕಛೇರಿಯನ್ನು ಸೋಮುವಾರ ಸಂಜೆ 7 ಗಂಟೆಗೆ ಉದ್ಘಾಟಿಸಿ, ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಬಾಬುರಾವ ಪಾಸ್ವಾನ ಮಾತನಾಡಿ, ಸಂಘಟನೆಗೆ ನಾವು ಬೆಳಸಿದರೆ, ನಮ್ಮಗೆ ಸಂಘಟನೆ ಬೆಳಸುತ್ತದೆ. ಸಂಘಟನೆ ಪಕ್ಷಾತೀತವಾಗಿ ಕೆಲಸವನ್ನು ಮಾಡಬೇಕು. 70, 80 ರ ದಶಕದಲ್ಲಿ ಕರ್ನಾಟಕ ರಾಜ್ಯದಲ್ಲಿ ದಲಿತ ಚಳುವಳಿ ಜನಸಾಮಾನ್ಯರ ನ್ಯಾಯದ ಧ್ವನಿಯಾಗಿ ಕೆಲಸ ಮಾಡಿತ್ತು. ಅಂದರಂತೆ ಕನ್ನಡ ಪರ ಸಂಘಟನೆಗಳು ನೆಲ ಜಲ ನಾಡು ನುಡಿ ಸಾಹಿತ್ಯ ಸಂಸ್ಕೃತಿ ಗಡಿ ವಿಷಯಬಂದಾಗಿ ಎಲ್ಲರೂ ಒಗ್ಗೂಡಿ ಕೆಲಸಮಾಡುವ ನಾಡಿನ ನ್ಯಾಯದ ಧ್ವನಿಯಾಗಿದೆ.

ಬೀದರ ಬಹು ಗಡಿಗಳಿಂದ ಆವೃತ್ತಗೊಂಡಿರುವ, ಬಹು ಭಾಷೆ ಮಾತನಾಡುವ ಜನರಿರುವ, ಬಹು ಸಂಸ್ಕೃತಿ ಆರಾದಿಸುವ ಕನ್ನಡ ಭಾಷೆ ಸಾಹಿತ್ಯವನ್ನು ಪ್ರೀತಿಸುವ ಜನರಿದ್ದಾರೆ. ಗಡಿ ಭಾಗದ ಜನರ ಧ್ವನಿಯಾಗಿ ವೀರ ಕನ್ನಡಿಗರ ಸೇನೆ ಕೆಲಸ ಮಾಡಬೇಕು. ಮುಖ್ಯ ಅತಿಥಿಗಳಾಗಿ ದಲಿತ ಸಂಘರ್ಷ ಸಮಿತಿ ಭೀಮ ಮಾರ್ಗದ ಬೀದರ ಜಿಲ್ಲಾ ಸಂಚಾಲಕ ಸಂಜುಕುಮಾರ ಮೇತ್ರೆ ಅಕ್ಷರ ದಾಸೋಹ ಜಿಲ್ಲಾಧ್ಯಕ್ಷ ಶಾಂತಕುಮಾರ ಶೇರಿಕಾರ, ಭೀಮ ಆರ್ಮಿ ಜಿಲ್ಲಾಧ್ಯಕ್ಷ ಅಂಬ್ರೀಶ ಕುದರೆ, ಹಿರಿಯರಾದ ತುಕರಾಮ ಕುದರೆ, ಭಾಗವಹಿಸಿದರು,

ಕಾರ್ಯಕ್ರಮದ ಅಧ್ಯಕ್ಷತೆ ವೀರ ಕನ್ನಡಿಗರ ಸೇನೆ ಜಿಲ್ಲಾಧ್ಯಕ್ಷ ಅಮರ ಪೂಜಾರಿ ವಹಿಸಿದರು, ಸ್ವಾಗತ ಪ್ರಾಸ್ತಾವಿಕ ನುಡಿ ಸೇನೆ ರಾಜ್ಯ ಸಂಚಾಲಕ ಡಾ. ಸುಬ್ಬಣ್ಣ ಕರಕನಳ್ಳಿ ಮಾಡಿದರು, ಸೇನೆ ಜಿಲ್ಲಾ ಗೌರವ ಅಧ್ಯಕ್ಷ ಈಶ್ವರ ಬಡಿಗೇರ, ಹಿರಿಯ ಉಪಾಧ್ಯಕ್ಷ ಬಸವರಾಜ ಜಡಗೆ, ಕಾರ್ಮಿಕ ಘಟಕದ ಜಿಲ್ಲಾಧ್ಯಕ್ಷ ಗೊಂವಿದ ಬಡಿಗೇರ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಬುರಾವ ಕೆ ಬಿಟ್ಟೆ, ಜಿಲ್ಲಾ ಖಜಾಂಚಿ ಕಲ್ಲಪ್ಪ ಚಾಂಬೋಳ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಶಶಿಧರ ಜ್ಯೋತಿ, ಜಿಲ್ಲಾ ಅಲ್ಪ ಸಂಖ್ಯಾತರ ಘಟಕದ ಅಧ್ಯಕ್ಷರಾದ ಮೊಹಿನ ಪಟೇಲ್ ಕಾರ್ಯಕರ್ತರಾದ ಶ್ರೀಕಾಂತ ಸೋರಳ್ಳಿಕರ್ ಭೀಮರಾವ ಕುದರೆ, ಮಹೇಶ ಮಡಿವಾಳ ಪ್ರಶಾಂತ ಹೂವಗಾರ ವಿಶಾಲ ಕುದರೆ, ಗುಣವಂತ ಭಾವಿಕಟ್ಟಿ, ರವಿ ಭಾವಿಕಟ್ಟಿ ರುದ್ರೇಶ ಚಿಟ್ಟಾ, ಮುಂತಾದವರಿದ್ದರು,

# ಉತ್ತರ ಒದಗಿಸದ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸೂಚನೆ

**ಬೆಂಗಳೂರು, ಮಾ. 10–** ಸದನದಲ್ಲಿ ಉತ್ತರಿಸುವ ಪ್ರಶ್ನೆಗಳಿಗೆ ಉತ್ತರ ಒದಗಿಸದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಿ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರು ಸರ್ಕಾರಕ್ಕೆ ಸೂಚನೆ ನೀಡಿದರು.

ಪ್ರಶ್ನೋತ್ತರ ಸಂದರ್ಭದಲ್ಲಿ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಲ್ಲಿ ಅರ್ಧಕ್ಕೂ ಹೆಚ್ಚು ಪ್ರಶ್ನೆಗಳಿಗೆ ಉತ್ತರ ಸಿಗದ ಬಗ್ಗೆ ಬಿಜೆಪಿಯ ಸುರೇಶ್‌ಕುಮಾರ್ ರವರು ಆಕ್ಷೇಪ ಎತ್ತಿದ್ದನ್ನು ಸಮರ್ಥಿಸಿ ಮಾತನಾಡಿದ ಸಭಾಧ್ಯಕ್ಷ ಯು.ಟಿ. ಖಾದರ್ ಅವರು, ನಿನ್ನೆ ಸಹ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ಉತ್ತರಗಳ ಸಂಖ್ಯೆ ಕಡಿಮೆ ಇತ್ತು.

ಇಂದು ಸಹ ಅದೇ ಆಗಿದೆ. ಈ ರೀತಿ ಆಗುವುದು ಸರಿಯಲ್ಲ. ಸಚಿವರುಗಳು ತಮ್ಮ ಇಲಾಖಾಧಿಕಾರಿಗಳಿಗೆ ಸೂಚನೆ ಕೊಡಬೇಕು. ಸದನದಲ್ಲಿ ಶಾಸಕರು ಕೇಳುವ ಎಲ್ಲಾ ಪ್ರಶ್ನೆಗಳಿಗೆ ತಡ ಮಾಡದೆ ಉತ್ತರಗಳು ಸದನಕ್ಕೆ ಬರಬೇಕು. ಉತ್ತರಗಳು ಸಿದ್ದಪಡಿಸಿ ಕೊಡುವುದಕ್ಕೆ ಐಎಎಸ್–ಐಪಿಎಸ್ ಆಗಬೇಕಾ, ಸದನಕ್ಕೆ ಉತ್ತರ ಕೊಡದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಿ ಎಂದು ಸೂಚನೆ ನೀಡಿದರು.

ಸಭಾಧ್ಯಕ್ಷರ ಮಾತಿಗೆ ಸ್ಪಂದಿಸಿ ಮಾತನಾಡಿದ ಕಾನೂನು



ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ್, ಸದನದಲ್ಲಿ ಶಾಸಕರು ಕೇಳುವ ಎಲ್ಲಾ ಪ್ರಶ್ನೆಗಳಿಗೂ ಉತ್ತರ ನೀಡಲೇಬೇಕು. ಉತ್ತರವನ್ನು ವಿಳಂಬ ಮಾಡದೇ ನೀಡುವಂತೆ ಎಲ್ಲಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಸೂಚನೆ ಕೊಟ್ಟಿದ್ದೇವೆ. ಸದನಕ್ಕೆ ಉತ್ತರ ಕೊಡಲು ವಿಳಂಬ ಮಾಡುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

# ತುಕ್ಕು ಹಿಡಿದ ವಿಜಯಪುರ ಸಂಚಾರ ವ್ಯವಸ್ಥೆ: ಮೇಜರ್ ಸರ್ಜರಿ ಯಾವಾಗ?

**ವಿಜಯಪುರ, ಮಾ. 10:** ವಿಶ್ವಖ್ಯಾತ ಗೋಳಗುಮ್ಮಟ ನಗರಿ ವಿಜಯಪುರದಲ್ಲಿ ಸಂಚಾರ ವ್ಯವಸ್ಥೆಗೆ ತುಕ್ಕು ಹಿಡಿದಿದ್ದು, ಶೀಘ್ರವಾಗಿ ಬೆಳವಣಿಗೆ ಹೊಂದುತ್ತಿರುವ ವಿಜಯಪುರ ನಗರದಲ್ಲಿ ಸಂಚಾರ ವ್ಯವಸ್ಥೆಗೆ ಕೂಡಲೇ ಮೇಜರ್ ಸರ್ಜರಿ ಬೇಕಿದೆ.
ಹೌದು. ಕಳೆದ ಹತ್ತಾರು ವರ್ಷಗಳಿಂದ ವಿಜಯಪುರ ಮಹಾನಗರದಲ್ಲಿ ತುಕ್ಕು ಹಿಡಿದ ಸಂಚಾರ ವ್ಯವಸ್ಥೆಯನ್ನು ಮುಂದುವರಿಸಿಕೊಂಡು ಹೋಗಲಾಗುತ್ತಿದೆ. ಇದರಿಂದಾಗಿ ವಾಹನ ಸವಾರರು ಹಾಗೂ ಪಾದಚಾರಿಗಳಿಗೆ ನಗರದಲ್ಲಿ ಸಂಚರಿಸಲು ತುಂಬಾ ಕಷ್ಟವಾಗುತ್ತಿದ್ದು, ವರ್ಷದಿಂದ ವರ್ಷಕ್ಕೆ ಮಹಾನಗರದಲ್ಲಿ ಜನಸಂಖ್ಯೆಯ ಜೊತೆ ಜೊತೆಯಲ್ಲಿಯೇ ವಾಹನಗಳ ಸಂಖ್ಯೆಯು ದ್ವಿಗುಣವಾಗುತ್ತಿದೆ. ಪಾದಚಾರಿಗಳಷ್ಟೇ ಅಲ್ಲ. ವಾಹನ ಸವಾರರು ಕೂಡ ವಿಜಯಪುರ ನಗರದಲ್ಲಿ ತಂತಿ ಮೇಲಿನ ನಡಿಗೆಯಂತೆ ಸಂಚರಿಸಬೇಕಾದ ಸ್ಥಿತಿ ಇದೆ.



**ಇಕ್ಕಟ್ಟಾದ ರಸ್ತೆಗಳು**–ವರ್ಷದಿಂದ ವರ್ಷಕ್ಕೆ ನಗರ ತೀವ್ರ ಬೆಳವಣಿಗೆ ಹೊಂದುತ್ತಿದ್ದು, ಆದರೆ ನಗರದ ರಸ್ತೆಗಳು ಮಾತ್ರ ಹೇಳಿಕೊಳ್ಳುವಷ್ಟು ಅಗಲವಾಗಿಲ್ಲ. ಹೀಗಾಗಿ ಜನದಟ್ಟಣೆ ಜೊತೆ ಜೊತೆಯಲ್ಲೇ ವಾಹನಗಳ ಸಂಖ್ಯೆ ಅಧಿಕವಾಗಿ ಸಂಚಾರ ವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟು ಹೋಗಿದೆ. ವಿಜಯಪುರ ನಗರದಲ್ಲಿ ವಾಹನ ಸವಾರರು ಅಷ್ಟೇ ಅಲ್ಲ. ಪಾದಚಾರಿಗಳೂ ಸಂಕಟ ಎದುರಿಸಬೇಕಾಗಿದೆ.
ವಿಜಯಪುರ ನಗರದಲ್ಲಿ ರೇಲ್ವೆ ಸ್ಟೇಷನ್ ನಿಂದ ಗಾಂಧಿ ವೃತದ ಮಾರ್ಗವಾಗಿ ಇಟಗಿ ಪೆಟ್ರೋಲ್ ಪಂಪ್ ವರೆಗೆ ದ್ವಿಪಥ ರಸ್ತೆ ನಿರ್ಮಾಣ ಮಾಡಲಾಗಿದೆ. ಗಾಂಧಿ ವೃತದಿಂದ ಸಿದ್ದೇಶ್ವರ ದೇವಸ್ಥಾನ ಮಾರ್ಗವಾಗಿ ಆಶ್ರಮ ಹೊರಗಿನ ರಸ್ತೆಯು ಕೂಡ ಅಷ್ಟೊಂದು ಅಗಲವಾಗಿಲ್ಲ. ನಗರದಲ್ಲಿ ಸರಿಯಾಗಿ ಪಾರ್ಕಿಂಗ್ ವ್ಯವಸ್ಥೆ ಇಲ್ಲದ ಕಾರಣ ರಸ್ತೆ ಎಡ, ಬಲ ಬದಿಯಲ್ಲಿ ಕಾರ್ ದ್ವಿಚಕ್ರ ವಾಹನಗಳ ನಿಲುಗಡೆಗೆ ಅವಕಾಶ ಮಾಡಿಕೊಡಲಾಗಿದೆ. ಹೀಗಾಗಿ ಎರಡು ಬದಿಯ ಬಹುತೇಕ ರಸ್ತೆಯಲ್ಲಿ ವಾಹನಗಳು ನಿಲುಗಡೆಯಾಗುತ್ತಿರುವುದರಿಂದ ರಸ್ತೆಗಳು ಇಕ್ಕಟ್ಟಾಗಿ ಇವೆ. ಇದಲ್ಲದೆ ರಸ್ತೆಗಳ ಎಡ, ಬಲಬದಿಯಲ್ಲಿ ಬೀದಿ ವ್ಯಾಪಾರಿಗಳು ರಸ್ತೆಗಳನ್ನು ಆಕ್ರಮಣ ಮಾಡಿಕೊಂಡಿರುವುದರಿಂದ ರಸ್ತೆಗಳು ಅಗಲೀಕರಣವಾದರೂ ಯಾವುದೇ ಪ್ರಯೋಜನ ಇಲ್ಲದಂತಾಗಿದೆ. ಹಲವು ಬಾರಿ ರಸ್ತೆ ಅಗಲೀಕರಣ ಕಾರ್ಯ ಕೈಗೊಂಡಿದ್ದರೂ ಹೇಳಿಕೊಳ್ಳುವ ಮಟ್ಟಿಗೆ ರಸ್ತೆಗಳು ವಿಸ್ತಾರಗೊಂಡಿಲ್ಲ. ಹೀಗಾಗಿ ಈ ಹಿಂದೆ ಕೈಗೊಂಡ ರಸ್ತೆ ಅಗಲೀಕರಣ ಕಾರ್ಯವು ಬರೀ ನಾಮಕಾವಾಸ್ತೆ ಎನ್ನುವಂತಾಗಿದೆ.
ಐತಿಹಾಸಿಕ ವಿಜಯಪುರ ನಗರಕ್ಕೆ ದೇಶ, ವಿದೇಶದಿಂದ ಸಹಸ್ರಾರು ಪ್ರವಾಸಿಗರು ನಿತ್ಯವೂ ಆಗಮಿಸುವುದು ಸಹಜ. ಬಂದವರೆಲ್ಲ ನಗರದಲ್ಲಿನ ಸಂಚಾರ ವ್ಯವಸ್ಥೆಯನ್ನು ಕಂಡು ಮೆಚ್ಚುಗೆ ವ್ಯಕ್ತಪಡಿಸುವ ಬದಲು ಅಪಹಾಸ್ಯ ಮಾಡಿ ತೆರಳುವಂತಾಗಿದೆ.

**ಕುಂಭಕರ್ಣ ನಿದ್ರೆಯಲ್ಲಿ ಪ್ಲಾನಿಂಗ್ ಡಿಪಾರ್ಟಮೆಂಟ್**–ನಗರ ಯೋಜನೆಯನ್ನು ಸಿದ್ಧಪಡಿಸಬೇಕಾದ ನಗರ ಅಭಿವೃದ್ಧಿ ಯೋಜನಾ ಇಲಾಖೆಯು ಇದ್ದೂ ಇಲ್ಲದಂತಾಗಿದೆ. ವಾಹನ ಸವಾರರ ಹಾಗೂ ಪಾದಚಾರಿಗಳ ತೊಂದರೆ ಕಡೆಗೆ ನಗರ ಅಭಿವೃದ್ಧಿ ಯೋಜನಾ ಇಲಾಖೆ ಕಿಂಚಿತ್ತೂ ಗಮನ ಹರಿಸದೇ ಕುಂಭಕರ್ಣ ನಿದ್ರೆಯಲ್ಲಿದೆ ಎಂದು ಜನರು ಹಿಡಿ ಶಾಪ ಹಾಕುತ್ತಿದ್ದಾರೆ.
ನಗರದ ಸ್ಟೇಷನ್ ರಸ್ತೆಯಿಂದ ಇಟಗಿ ಪೆಟ್ರೋಲ್ ಪಂಪ್ ವರೆಗೆ ದ್ವಿಪಥ ರಸ್ತೆ ಇದ್ದರೂ ಎಲ್ಲ ವಾಹನಗಳಿಗೆ ಏಕಮುಖ ಸಂಚಾರ ವ್ಯವಸ್ಥೆಯನ್ನು ಜಾರಿ ಮಾಡಿಲ್ಲ. ಸ್ಟೇಷನ್ ನಿಂದ, ಗಣೇಶನಗರದಿಂದ ತೊರವಿಯಿಂದ ಸಂಚರಿಸುವ ಆಟೋಗಳಿಗೆ ಗಾಂಧಿ ಚೌಕ್ ಬಳಿ ಇರುವ ಸರ್ಕಾರಿ ಗೌರ್ಮೆಂಟ್ ಕಾಲೇಜ್ ಪಕ್ಕದ ರಸ್ತೆಯಲ್ಲಿಯೇ ಆಟೋಗಳಿಗೆ ಸಂಚರಿಸಲು ಅವಕಾಶ ನೀಡಿದ್ದರಿಂದ ಸರ್ಕಾರಿ ಗೌರ್ಮೆಂಟ್ ಕಾಲೇಜ್ ಬದಿಯಲ್ಲಿ ಇರುವ ಕಾಲಿಡದಷ್ಟು ರಸ್ತೆಯಲ್ಲಿ ಆಟೋಗಳ ದಟ್ಟಣೆ ಆಗುತ್ತಿದ್ದು, ಗೌರ್ಮೆಂಟ್ ಕಾಲೇಜಿಗೆ ತೆರಳುವ ವಿದ್ಯಾರ್ಥಿಗಳಿಗೆ, ಉಪನ್ಯಾಸಕರಿಗೆ ಕಾಲೇಜಿಗೆ ಹೋಗಿ ಬರಲು ಜೀವ ಕೈ ಯಲ್ಲಿ ಹಿಡಿದು ಸಂಚರಿಸಬೇಕಾಗಿದೆ. ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು ಈ ಬಗ್ಗೆ ಹತ್ತಾರು ಸಲ ಸಂಬಂಧಿಸಿದ ಅಧಿಕಾರಿಗಳಿಗೆ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ.

**ಸಿಗ್ನಲ್ ಬಳಿಯೇ ಆಟೋ ನಿಲುಗಡೆ**–ಈ ಮೊದಲು ವಿಜಯಪುರ ನಗರದ ಹೆಡ್ ಪೋಸ್ಟ್ ಆಫೀಸ್ ಬದಿ ರಸ್ತೆಯಲ್ಲಿ ಜನರು ಆಟೋ ಹಿಡಿಯಲು ಪಿಕಪ್ ಪಾಯಿಂಟ್ ಕಲ್ಪಿಸಲಾಗಿತ್ತು. ಅದನ್ನು ರದ್ದುಪಡಿಸಿ ಗಾಂಧಿ ವೃತದಲ್ಲಿ ರಸ್ತೆ ಸಿಗ್ನಲ್ ಬುಡದಲ್ಲಿಯೇ ಸಾರ್ವಜನಿಕರಿಗೆ ಆಟೋ ಹಿಡಿಯಲು ಪಿಕಪ್ ಪಾಯಿಂಟ್ ಕಲ್ಪಿಸಲಾಗಿದೆ. ಇದು ಅವೈಜ್ಞಾನಿಕ ಪಿಕಪ್ ಪಾಯಿಂಟ್ ಎಂದು ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಕೇಳಿ ಬಂದರೂ ಸಂಬಂಧಿಸಿದ ಇಲಾಖೆಯವರು ಕಿಂಚಿತ್ತೂ ಗಮನ ಹರಿಸಿಲ್ಲ. ಒಟ್ಟಿನಲ್ಲಿ ವಿಜಯಪುರ ನಗರದಲ್ಲಿ ಸಂಚಾರ ವ್ಯವಸ್ಥೆ ಎಂಬುದು ಸಾರ್ವಜನಿಕರ ಪಾಲಿಗೆ ನರಕ ಯಾತನೆ ಅನುಭವಿಸುವಂತಾಗಿದೆ. ಇನ್ನಾದರೂ ಜಿಲ್ಲೆಯ ಜನಪ್ರತಿನಿದಿನಗಳು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸೇರಿದಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಹದಗೆಟ್ಟ ಸಂಚಾರ ವ್ಯವಸ್ಥೆಗೆ ಮೇಜರ್ ಸರ್ಜರಿಗೆ ಕ್ರಮ ಕೈಗೊಳ್ಳುವರೆ? ಎಂದು ವಿಜಯಪುರ ಜನತೆ ಜಾತಕ ಪಕ್ಷಿಯಂತೆ ಎದುರು ನೋಡುತ್ತಿದ್ದಾರೆ.

# ಆಳಂದನಲ್ಲಿ ತಾಲೂಕು ಮಟ್ಟದ ಅದ್ದೂರಿ ಉತ್ಸವಕ್ಕೆ ತಯಾರಿ: ನಡಗೇರಿ



**ಆಳಂದ್:ಮಾ.10:** ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಆಚರಣೆಗಾಗಿ ಆಳಂದ್ ತಾಲೂಕು ಮಟ್ಟದಲ್ಲಿ ಉತ್ಸವ ಸಮಿತಿಯ ಪದಾಧಿಕಾರಿಗಳ ಆಯ್ಕೆ ಮಾಡಲಾಗಿದೆ ಎಂದು ಪುರುಸಭೆ ನಿಕಟಪೂರ್ವ ಸದಸ್ಯ ಆಗಿರುವ ಜಯಂತಿ ಪ್ರಚಾರ ಸಮಿತಿಯ ಅಧ್ಯಕ್ಷ, ಶಿವಪುತ್ರ ನಡಗೇರಿ ಅವರು ತಿಳಿಸಿದ್ದಾರೆ.
ಈ ಕುರಿತು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೋಮವಾರ ಕರೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ ಉತ್ಸವ ಸಿದ್ಧತೆ ಮತ್ತು ಆಚರಣೆ ಕುರಿತಾಗಿ ಮಾಹಿತಿ ನೀಡಿ ಮಾತನಾಡಿದರು,
ಈ ಬಾರಿ ಶ್ರೀರಾಮ ಮಾರುಕಟ್ಟೆಯಲ್ಲಿ ಅದ್ಭುತ ಸಾಂಸ್ಕೃತಿಕ–ಸಾಮಾಜಿಕ ಕಾರ್ಯಕ್ರಮಗಳೊಂದಿಗೆ ಉತ್ಸವ ನಡೆಸಲು ನಿರ್ಧರಿಸಲಾಗಿದೆ. ಹಿರಿಯರು ಮತ್ತು ಯುವಕರ ಸೇರ್ಪಡೆಯೊಂದಿಗೆ ರಚಿತವಾದ ಈ ಸಮಿತಿ, ಅಂಬೇಡ್ಕರ್ ಅವರ ಆದರ್ಶಗಳನ್ನು ಗ್ರಾಮೀಣ–ನಗರ ಪ್ರದೇಶಗಳಲ್ಲಿ ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ವಿನೂತನ ಕಾರ್ಯಕ್ರಮಕ್ಕೆ ತಯಾರಿಮಾಡಲಾಗಿದೆ. ಪ್ರತಿವರ್ಷ ಆಳಂದನ ಭೀಮ ನಗರದಲ್ಲಿ ನಡೆಯುತ್ತಿದ್ದ ಜಯಂತಿ ಆಚರಣೆ ಈ ಬಾರಿ ತಾಲೂಕು ಮಟ್ಟದಲ್ಲಿ ಶ್ರೀರಾಮ ಮಾರುಕಟ್ಟೆಯಲ್ಲಿ ಅದ್ದೂರಿಯಾಗಿ ನಡೆಸಲು ನಿರ್ಧರಿಸಿದ್ದೇವೆ. ಪಟ್ಟಣದೊಂದಿಗೆ ಗ್ರಾಮೀಣ ಭಾಗದ ಎಲ್ಲರೂ ಐಕ್ಯಬದ್ಧರಾಗಿ ಈ ಉತ್ಸವದ ಯಶಸ್ಸಿಗೆ ಕೈಜೋಡಿಸಿ" ಎಂದು ಮನವಿ ಮಾಡಿದರು.

ಜಯಂತಿ ಸಮಿತಿಯು ಅಧ್ಯಕ್ಷರಾಗಿ ಸೂರ್ಯಕಾಂತ್ ಸಾಲೆಗಾಂವ್, ಉಪಾಧ್ಯಕ್ಷ ಗಂಗಾರಾಮ್ ಮುದ್ಗಾಲೆ, ಖಜಾಂಚಿ ಪಾಂಡುರಂಗ ಮೊದಲೆ, ಕಾರ್ಯದರ್ಶಿ ದಯಾನಂದ್ ಸಾಲೆಗಾಂವ್, ಸಹ ಕಾರ್ಯದರ್ಶಿ ಲಕ್ಷ್ಮಣ್ ಝುಳಕಿಕರ್, ಸಂಘಟನಾ ಕಾರ್ಯದರ್ಶಿ ಚಂದ್ರಕಾಂತ್ ಜಂಗಲೆ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ವಿವರಿಸಿದರು.
ಪ್ರಚಾರ ಸಮಿತಿಯ ಉಪಾಧ್ಯಕ್ಷ ಜೈ ಭೀಮ್ ಆರ್. ದೊಡ್ಡಿ ಮುತ್ತಣ್ಣಾ ಎಸ್. ಜಂಗಲೆ. ಪಿಂಟು ಎಸ್. ಸಾಲೆಗಾಂವ್, ಸಚಿನ್ ಎಸ್. ದೇವನೂರ್, ಪ್ರಶಾಂತ್ ಎಸ್. ವಗ್ಗೆ ಮತ್ತು ಅಜೆಯ್ ಸಿ. ಮಂಟಗಿಕರ್ ಅಲ್ಲದೆ, ಪ್ರಧಾನ ಕಾರ್ಯದರ್ಶಿ ಕೆಂಚಣ್ಣ ಸಿ. ಝುಳಕೆ, ವಿಕ್ರಮ ಎಸ್. ಅಷ್ಟಗಿ, ಸುಧಾಕರ್ ಸಿ. ಮೊದಲೆ, ಪ್ರವೀಣ್ ಪಿ. ಮೊದಲೆ, ಪ್ರಜ್ವಲ್ ಎಚ್. ಮಂಟಕಿರ್ ಅಯ್ಕೆಮಾಡಿ ಸಂಘಟಿಸಲಾಗುತ್ತಿದೆ ಎಂದು ಹೇಳಿದರು.
ಈ ಸಂದರ್ಭದಲ್ಲಿ ಹಿರಿಯ ಮುಖಂಡರು ಕಿರಿಯ ಕಾರ್ಯಕರ್ತರು ಘೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಉಜ್ವಲಾ ಯೋಜನೆ ಮೂಲಕ ಮಹಿಳೆಯರ ಬದುಕಿಗೆ ಸೌಲಭ್ಯ:ಅನಂತಪೂರ



**ಜಮಖಂಡಿ:ಮಾ.10:**ತಾಲೂಕಿನ ಗೋಠೆ ಗ್ರಾಮದಲ್ಲಿ ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಉಜ್ವಲಾ ಯೋಜನೆಯಡಿ ಮಹಿಳೆಯರಿಗೆ ಗ್ಯಾಸ್ ವಿತರಣೆ ಕಾರ್ಯಕ್ರಮ ನಡೆಯಿತು. ಗ್ರಾಮದ ಸಂಗಮನಾಥ ಇಂಡಿಯನ್ ಗ್ಯಾಸ್ ಏಜೆನ್ಸಿ ಹಾಗೂ ಗ್ರಾಮ ಮುಖಂಡರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮೂವತ್ತಕ್ಕೂ ಅಧಿಕ ಮಹಿಳೆಯರಿಗೆ ಉಚಿತ ಗ್ಯಾಸ್ ಸಂಪರ್ಕಗಳನ್ನು ಹಂಚಿಕೊಡಲಾಯಿತು.
ಈ ಸಂದರ್ಭದಲ್ಲಿ ಗ್ರಾಮ ಮುಖಂಡ ಮಲ್ಲಪ್ಪ ಅನಂತಪೂರ ಮಾತನಾಡಿ, ಸರ್ಕಾರದ ಯೋಜನೆಯಿಂದ ಮಹಿಳೆಯರ ಜೀವನದಲ್ಲಿ ಸುಲಭತೆ ಹೆಚ್ಚಾಗಲಿದೆ ಎಂದು ಹೇಳಿದರು. ಅಡುಗೆಗೆ ಮರದ ಇಂಧನ ಬಳಕೆಯಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಹಾಗೂ ಪರಿಸರ ಸಂರಕ್ಷಣೆಗೆ ಸಹಕಾರಿಯಾಗಲು ಉಜ್ವಲಾ ಯೋಜನೆ ನೆರವಾಗುತ್ತಿದೆ ಎಂದು ಅಭಿಪ್ರಾಯಪಟ್ಟರು.
ಸಂಗಮನಾಥ ಇಂಡಿಯನ್ ಗ್ಯಾಸ್ ಏಜೆನ್ಸಿಯವರು ಗ್ರಾಮದಲ್ಲಿ ಇನ್ನೂ ಹೆಚ್ಚಿನ ಕುಟುಂಬಗಳಿಗೆ ಈ ಯೋಜನೆ ತಲುಪಿಸಲು ಬದ್ಧರಾಗಿರುವುದಾಗಿ ತಿಳಿಸಿದರು.
ಈ ಸಂದರ್ಭದಲ್ಲಿ ವಿಠ್ಠಲ್ ಹೊಸಮನಿ, ಮಲ್ಲು ಕೊಕಟನೂರ, ಸಚಿನ್ ಹರಪಳೆ, ಆಜೀದ್ ಮುಜವಾರ, ಮಂಜು ಅನಂತಪೂರ, ಸಿದ್ದು ಲೋನಾರ, ವಿಠ್ಠಲ ಕಳಸಣ್ಣವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಹೂಗಾರ ಸಮಾಜ ಸಂಘಟನೆಗೆ ಕೈಜೋಡಿಸಲು: ಪ್ರಕಾಶ ಫುಲಾರ ಮನವಿ

**ಆಳಂದ:ಮಾ.10–** ತೀರಾ ಹಿಂದುಳಿದ ಹೂಗಾರ ಸಮಾಜದ ಅಭಿವೃದ್ಧಿ ಮತ್ತು ಸಂಘಟನೆ ಬಲಪಡಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕೆಂದು ತಾಲೂಕು ಹೂಗಾರ ಸಮಾಜದ ನೂತನ ಅಧ್ಯಕ್ಷ ಪ್ರಕಾಶ ಬಿ. ಫುಲಾರ ಅವರು ಕರೆ ನೀಡಿದರು.

ಪಟ್ಟಣದ ಶ್ರೀ ಭಕ್ತಮಾರ್ಕಂಡೇಶ್ವರ ದೇವಸ್ಥಾನದಲ್ಲಿ ಕರೆದ ತಾಲೂಕು ಹೂಗಾರ ಸಮಾಜದ ಸಭೆಯಲ್ಲಿ ಕೈಗೊಂಡ ತಾಲೂಕು ಘಟಕದ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ತಾವು ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಸಮಾಜ ಬಾಂಧರು ಕೈಗೊಂಡ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಸಮಾಜದ ಕುಂದುಕೊರತೆಗಳ ನಿವಾರಣೆ, ಸಮಗ್ರ ಅಭಿವೃದ್ಧಿಗೆ ಸಂಘಟಿತ ಪ್ರಯತ್ನ ಅಗತ್ಯವಿದೆ. ಇದಕ್ಕಾಗಿ ಎಲ್ಲಾ ಪದಾಧಿಕಾರಿಗಳು, ಕಾರ್ಯಕರ್ತರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿದರೆ ಮಾತ್ರ ಸಮಾಜವನ್ನು ಮತ್ತಷ್ಟು ಶಕ್ತಿಯುತವಾಗಿಸಬಹುದು. ಹೆಚ್ಚಿನ ಸಂಖ್ಯೆಯಲ್ಲಿ ದುಡಿಯುವ ಹಾಗೂ ಸರಳ ಮನಸ್ಸಿನ ಜನರು ಇದ್ದಾರೆ. ಇಂತಹ ಜನರ ಅಭಿವೃದ್ಧಿಗಾಗಿ ಬಸವಣ್ಣನವರು ತೋರಿಸಿದ ಸನ್ಮಾರ್ಗದಲ್ಲಿ ನಡೆದು ಸಮಾಜದ ಸಮಸ್ಯೆಗಳು, ಬೇಡಿಕೆಗಳ ಪರಿಹಾರಕ್ಕೆ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು.

ಸರ್ಕಾರದ ಯೋಜನೆಗಳು ಮತ್ತು ಸೌಲಭ್ಯಗಳನ್ನು ಸಮಾಜದವರು ಸಮರ್ಪಕವಾಗಿ ಪಡೆದುಕೊಳ್ಳಬೇಕು. ಇದರಿಂದ ಸಮಾಜದವರು ಆರ್ಥಿಕ, ಸಾಮಾಜಿಕ,



ಶೈಕ್ಷಣಿಕವಾಗಿ ಪ್ರಗತಿ ಸಾಧಿಸಲು ಸಾಧ್ಯವಾಗುತ್ತದೆ. ಸಮಾಜದ ಯಾವುದೇ ಸಮಸ್ಯೆಗಳು ಅಥವಾ ಅಗತ್ಯತೆಗಳಿದ್ದರೆ ಅವನ್ನು ಗಮನಕ್ಕೆ ತಂದರೆ ನಿವಾರಣೆಗೆ ಶ್ರಮಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಮಾಜದ ಗೌರವಾಧ್ಯಕ್ಷ ಚಂದ್ರಕಾಂತ ಬಿ. ಫುಲಾರ ಅವರು, ಸಮಾಜದ ಏಕತೆ ಮತ್ತು ಸಂಘಟನೆ ಬಲವಾಗಿದ್ದರೆ ಮಾತ್ರ ಸಮುದಾಯದ ಹಿತಾಸಕ್ತಿ ಕಾಪಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಹಿರಿಯ ಸಲಹೆಗಾರ ಡಾ. ಮೋಹನ ಜಿಡ್ಡಿಮನಿ, ಸಮಾಜದ ಯುವಕರು ಶಿಕ್ಷಣ ಹಾಗೂ ಉದ್ಯೋಗ ಕ್ಷೇತ್ರದಲ್ಲಿ ಮುಂದುವರಿದು ಸಮುದಾಯದ ಗೌರವವನ್ನು ಹೆಚ್ಚಿಸುವಂತಾಗಲು ಪದಾಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಉಪಾಧ್ಯಕ್ಷ ಹಣಮಂತ ಅಂಬೇವಾಡ ಮಾತನಾಡಿ, ಸಮಾಜದ ಒಳಗಿರುವ ಸಮಸ್ಯೆಗಳನ್ನು ಗುರುತಿಸಿ ಅವುಗಳಿಗೆ ಪರಿಹಾರ ಕಂಡುಹಿಡಿಯುವ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ತಾಲೂಕಿನ ವಿವಿಧ ಗ್ರಾಮಗಳಿಂದ ಹೂಗಾರ ಬಾಂಧವರು ಭಾಗವಹಿಸಿದ್ದರು.

ನೂತನ ಪದಾಧಿಕಾರಿ ಆಯ್ಕೆ:

ಪ್ರಕಾಶ ಬಾಬುರಾವ್ ಫುಲಾರ (ಅಧ್ಯಕ್ಷ), ಚಂದ್ರಕಾಂತ ಫುಲಾರ ಆಳಂದ (ಗೌರವ ಅಧ್ಯಕ್ಷ), ಹಣಮಂತ ಹೂಗಾರ, ಮಲ್ಲಿಕಾರ್ಜುನ ಮಾನಾಜಿ, ಶರಣಬಸಪ್ಪ ಹೂಗಾರ ಮಾಡಿಯಾಳ, ಪ್ರಶಾಂತ ಬಿರಾದಾರ (ಉಪಾಧ್ಯಕ್ಷ), ಗಂಗಾಧರ ಆರ್. ಪೂಜಾರಿ ಹಿತಲಶಿರೂರ, ಪುರುಶೋತಮ ಮಂಟಗಿ ಇನಾಮದಾರ (ಖಜಾಂಚಿ), ಭೀಮಾಶಂಕರ ಎಸ್. ಹೂಗಾರ (ಸಂಘಟನಾ ಕಾರ್ಯದರ್ಶಿ), ಸಿದ್ಧರಾಮ ಜಿ. ಹೂಗಾರ (ಸಹ ಕಾರ್ಯದರ್ಶಿ), ಸೈಬಣ್ಣ ಬಿ. ಹೂಗಾರ (ಕಾರ್ಯದರ್ಶಿ), ಡಾ. ಮೋಹನ ಜಿಡಿಮನಿ ಮತ್ತು ಚಂದ್ರಕಾಂತ ಹಿತ್ತಲಶಿರೂರ (ಹಿರಿಯ ಸಲಹೆಗಾರ), ಅಲ್ಲದೆ, ಸೋಮನಾಥ ಎ. ಫುಲಾರ, ಸಂಜುಕುಮಾರ ಫುಲಾರ, ಸಿದ್ಧು ಹೂಗಾರ, ವಿಶ್ವನಾಥ ಫುಲಾರ, ಬಸವನರಾಜ ಎಂ. ಹೂಗಾರ, ಸೋಮನಾಥ ಕೆ. ಡಾಂಗೆ, ಸಂತೋಷ ಎಸ್. ಹಿರೋಳಿ, ನಾಗೇಂದ್ರಪ್ಪ ಕೊಡಲಹಂಗರಗಾ, ಗಜಾನನ ಕೆ. ಅವಟೆ, ಕಮಲೇಶ ಕೆ. ಅವಟೆ, ಮಹಾದೇವ ಬಾಳಿ ಸೇರಿದಂತೆ ಇನ್ನಿತರರು ಸದಸ್ಯರನ್ನಾಗಿ ಆಯ್ಕೆ ಮಾಡಲಾಯಿತು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE